ಕರ್ನಾಟಕ ಸರ್ಕಾರ

ಅರಣ್ಯ ಇಲಾಖೆ

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು, ಅರಣ್ಯ ಪಡೆ) ಹಾಗೂ ಆಯ್ಕೆ ಪ್ರಾಧಿಕಾರ ಇವರ ಕಚೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು-560003

# ಅಧಿಸೂಚನೆ

**ಅಧಿಸೂಚನೆ ಸಂಖ್ಯೆ: ಬಿ9-ನೇಮಕಾತಿ-ಏವ-1/2017-18 ದಿನಾಂಕ: 10-04-2017**

**ಅರಣ್ಯ ರಕ್ಷಕ ಹುದ್ದೆಗಳಿಗೆ ನೇರ ನೇಮಕಾತಿ**

* * * *

ಅರಣ್ಯ ಇಲಾಖೆಯಲ್ಲಿ 240 ಅರಣ್ಯ ರಕ್ಷಕ ಹುದ್ದೆಗಳಿಗೆ ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು 2012 ರಂತೆ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. **ಅರ್ಜಿ ಸಲ್ಲಿಸುವ ವಿಧಾನ:**

ಅರ್ಜಿಯನ್ನು On-line ಮುಖಾಂತರ ಅಭ್ಯರ್ಥಿಗಳು ಸಲ್ಲಿಸತಕ್ಕದ್ದು. On-line ಅರ್ಜಿ, ಅಧಿಸೂಚನೆ, Syllabus ಇವುಗಳನ್ನು ಇಲಾಖಾ ವೆಬ್‌ಸೈಟ್: www.aranya.gov.in ನಲ್ಲಿ ಪ್ರಕಟಪಡಿಸಲಾಗುವುದು. ಇದನ್ನು ಹೊರತುಪಡಿಸಿ ಯಾವುದೇ ವಿಧದಲ್ಲಿ ಅರ್ಜಿಯನ್ನು ಸಲ್ಲಿಸಲು ಅವಕಾಶವಿರುವುದಿಲ್ಲ. On-line ಅರ್ಜಿಯನ್ನು ತುಂಬಲು ಸಹಾಯಕವಾಗುವ ಸೂಚನೆಗಳನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ನೀಡಲಾಗುವುದು. ಒಬ್ಬ ಅಭ್ಯರ್ಥಿ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಬಾರದು. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿದ ಆನ್‌ಲೈನ್ ಅರ್ಜಿಯ ಒಂದು ಜೆರಾಕ್ಸ್ ಪ್ರತಿಯನ್ನು ತೆಗೆದು ತಮ್ಮ ಬಳಿ ಇಟ್ಟುಕೊಳ್ಳತಕ್ಕದ್ದು. **On-line ಅರ್ಜಿಯ ಪ್ರತಿಯನ್ನು ಅಂಚೆ ಮುಖಾಂತರ ಅಥವಾ ಮುದ್ದಾಂ ಆಗಿ ಇಲಾಖೆಗೆ ಸಲ್ಲಿಸಬೇಕಾದ ಅವಶ್ಯಕತೆ ಇರುವುದಿಲ್ಲ.**

1.1. ಜನ್ಮ ದಿನಾಂಕ ದೃಢೀಕರಿಸುವ ಪ್ರಮಾಣ ಪತ್ರ, ಶೈಕ್ಷಣಿಕ ಪ್ರಮಾಣ ಪತ್ರಗಳು, ಜಾತಿ / ಪ್ರವರ್ಗ ದೃಢೀಕರಿಸುವ ಪ್ರಮಾಣ ಪತ್ರಗಳು, ಗ್ರಾಮೀಣ, ಕನ್ನಡ ಮಾಧ್ಯಮ, ಯೋಜನಾ ನಿರಾಶ್ರಿತ, ಕುಷ್ಠರೋಗದಿಂದ ಗುಣಮುಖ ಹೊಂದಿದ ಬಗ್ಗೆ ವೈದ್ಯಕೀಯ ಪ್ರಮಾಣ ಪತ್ರ, ಸೈನಿಕ ಸೇವೆ ದೃಢೀಕರಣ ಪ್ರಮಾಣ ಪತ್ರಗಳನ್ನು ಸ್ಕ್ಯಾನ್ ಮಾಡಿ ಇಲಾಖಾ ವೆಬ್ ಸೈಟ್‌ಗೆ ಅರ್ಜಿ ಸಲ್ಲಿಸುವ ವೇಳೆಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು, ಈ ಕುರಿತು ಪೂರ್ಣ ಮಾಹಿತಿಯನ್ನು ಅರ್ಜಿ ಸಲ್ಲಿಸುವ ವೇಳೆಯಲ್ಲಿ ವೆಬ್‌ಸೈಟ್‌ನಲ್ಲಿ ತಿಳಿಸಲಾಗುವುದು. ಅಭ್ಯರ್ಥಿಯು ಯಾವ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ವೇಳೆ ಅಪ್‌ಲೋಡ್ ಮಾಡಿರುತ್ತಾರೆಯೋ ಅದೇ ಪ್ರಮಾಣ ಪತ್ರವನ್ನು ಎಲ್ಲಾ ಹಂತದಲ್ಲೂ ಪರಿಗಣನೆಗೆ ತೆಗೆದುಕೊಳ್ಳಲಾಗುವುದು. ಇದನ್ನು ಯಾವ ಹಂತದಲ್ಲಿಯೂ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

1.2. On-line ಮುಖಾಂತರ ಅರ್ಜಿಯನ್ನು ದಿನಾಂಕ 15-05-2017 ರಿಂದ 14-06-2017 ರಂದು ಅಪರಾಹ್ನ 4.30 ಗಂಟೆಯವರೆಗೆ ಸಲ್ಲಿಸಬಹುದಾಗಿರುತ್ತದೆ.

1.3. 1:20 (ಹುದ್ದೆ/ಅಭ್ಯರ್ಥಿ) ಅರ್ಹ ಅಭ್ಯರ್ಥಿಗಳಿಗೆ ಪ್ರವೇಶ ಪತ್ರ ಮತ್ತು ಮೂಲ ದಾಖಲೆಗಳ ಪರಿಶೀಲನೆ, ದೇಹದಾರ್ಢ್ಯತೆ, ದೈಹಿಕ ತಾಳ್ವಿಕೆ ಮತ್ತು ಲಿಖಿತ ಪರೀಕ್ಷೆ ನಡೆಯುವ ಸ್ಥಳ ಮತ್ತು ವೇಳೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. 1:20 ಪಟ್ಟಿಯಲ್ಲಿರುವ ಅಭ್ಯರ್ಥಿಗಳು ತಮ್ಮ ಪ್ರವೇಶ ಪತ್ರವನ್ನು ಇಲಾಖಾ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡುವುದು. ಇದನ್ನು ಹೊರತುಪಡಿಸಿ ಅಂಚೆ ಮುಖಾಂತರ ಪ್ರವೇಶ ಪತ್ರವನ್ನು ಕಳುಹಿಸಲಾಗುವುದಿಲ್ಲ. ಅಂಚೆ ಕಚೇರಿಯಲ್ಲಿ ದಿನಾಂಕ: 17-06-2017 ಅಪರಾಹ್ನ 1.00 ಗಂಟೆ ಮುಂಚಿತವಾಗಿ ಶುಲ್ಕವನ್ನು ಪಾವತಿಸಬಹುದಾಗಿರುತ್ತದೆ.

1.4. **ಅರ್ಜಿ ಶುಲ್ಕ:**

ಸಾಮಾನ್ಯ ವರ್ಗ, IIA, IIB, IIIA, IIIB ಪ್ರವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕ ರೂ. 100.00 + ಸೇವಾ ಶುಲ್ಕ ರೂ. 15.00; ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ-1 ಮತ್ತು ಕುಷ್ಠ ರೋಗದಿಂದ ಗುಣಮುಖಹೊಂದಿದ ಅಂಗವಿಕಲ ಅಭ್ಯರ್ಥಿ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕ ರೂ. 25.00 + ಸೇವಾ ಶುಲ್ಕ ರೂ. 15.00. On-line ನಲ್ಲಿ ಅರ್ಜಿ ಸಲ್ಲಿಸಿದ ನಂತರ, ಮುದ್ರಿತ ಅರ್ಜಿ ಪ್ರತಿಯನ್ನು

ತೆಗೆದುಕೊಂಡು, ಇ-ಪಾವತಿ ಸೌಲಭ್ಯವಿರುವ ಅಂಚೆ ಕಚೇರಿಯಲ್ಲಿ ಮುದ್ರಿತ ಅರ್ಜಿ ಪ್ರತಿಯನ್ನು ತೋರಿಸಿ, ಈ ಮೇಲೆ ಹೇಳಿರುವ ಅರ್ಜಿ ಶುಲ್ಕ ಮತ್ತು ಸೇವಾ ಶುಲ್ಕವನ್ನು ಅಭ್ಯರ್ಥಿಗಳು ಪಾವತಿಸತಕ್ಕದ್ದು.

**ಸೂಚನೆ:** On-line ನಲ್ಲಿ ಅರ್ಜಿಯನ್ನು ಸಲ್ಲಿಸದೇ ನೇರವಾಗಿ ಕೊರಿಯರ್, ನೊಂದಾಯಿತ ಅಂಚೆ, ಸಾಧಾರಣ ಅಂಚೆ, ಮುದ್ದಾಂ ಇತ್ಯಾದಿ ವಿಧಾನಗಳ ಮುಖಾಂತರ ಕಳುಹಿಸಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

1.5. ಹುದ್ದೆಗಳ ವಿವರ:

| ಅರಣ್ಯ ರಕ್ಷಕ: ವೇತನ ಶ್ರೇಣಿ: ರೂ. 11600-200-12000-250-13000-300-14200-350-15600-400-17200-450-19000-500-21000 | | | | | |
|---|---|---|---|---|---|
| ಕ್ರ ಸಂ. | ಅರಣ್ಯ ವಿಭಾಗ | ಹುದ್ದೆಗಳ ಸಂಖ್ಯೆ | ಕ್ರ ಸಂ. | ಅರಣ್ಯ ವಿಭಾಗ | ಹುದ್ದೆಗಳ ಸಂಖ್ಯೆ |
| 1 | ಹುಲಿ ಸಂರಕ್ಷಿತ ಪ್ರದೇಶ, ಬಂಡೀಪುರ | 15 | 14 | ಹುಣಸೂರು ವಿಭಾಗ | 5 |
| 2 | ಬಿ.ಆರ್.ಟಿ. ಹುಲಿ ಸಂರಕ್ಷಿತ ಪ್ರದೇಶ, ಚಾಮರಾಜನಗರ | 20 | 15 | ಮಡಿಕೇರಿ ವಿಭಾಗ | 25 |
| 3 | ಕಾವೇರಿ ವನ್ಯಜೀವಿ ವಿಭಾಗ, ಕೊಳ್ಳೇಗಾಲ | 25 | 16 | ವಿರಾಜಪೇಟೆ ವಿಭಾಗ | 25 |
| 4 | ಭದ್ರಾ ಹುಲಿ ಸಂರಕ್ಷಿತ ಪ್ರದೇಶ, ಚಿಕ್ಕಮಗಳೂರು | 5 | | | |
| 5 | ಕುದುರೆಮುಖ ವನ್ಯಜೀವಿ ವಿಭಾಗ, ಕಾರ್ಕಳ | 5 | | | |
| 6 | ರಾಣೆಬೆನ್ನೂರು ವನ್ಯಜೀವಿ ಉಪ ವಿಭಾಗ | 2 | | | |
| 7 | ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ, ಹುಣಸೂರು | 20 | | | |
| 8 | ಅಣಶಿ-ದಾಂಡೇಲಿ ಹುಲಿ ಸಂರಕ್ಷಿತ ಪ್ರದೇಶ, ದಾಂಡೇಲಿ | 10 | | | |
| 9 | ರಾಷ್ಟ್ರೀಯ ಉದ್ಯಾನವನ, ಬನ್ನೇರುಘಟ್ಟ | 5 | | | |
| 10 | ವನ್ಯಜೀವಿ ವಿಭಾಗ, ಮೈಸೂರು | 3 | | | |
| 11 | ವನ್ಯಜೀವಿ ವಿಭಾಗ, ಶಿವಮೊಗ್ಗ | 20 | | | |
| 12 | ಮಲೈ ಮಹದೇಶ್ವರ ವನ್ಯಜೀವಿ ವಿಭಾಗ, ಕೊಳ್ಳೇಗಾಲ | 30 | | | |
| 13 | ವನ್ಯಜೀವಿ ವಿಭಾಗ, ಮಡಿಕೇರಿ | 25 | | | |
| | ವನ್ಯಜೀವಿ ವಿಭಾಗ ಒಟ್ಟು | **185** | | ಪ್ರಾದೇಶಿಕ ವಿಭಾಗ ಒಟ್ಟು | **55** |
| | | | | ವನ್ಯಜೀವಿ ವಿಭಾಗ ಹಾಗೂ ಪ್ರಾದೇಶಿಕ ವಿಭಾಗ ಸೇರಿ ಒಟ್ಟು | **240** |

2. **ಹುದ್ದೆಗಳ ಮೀಸಲಾತಿ ವರ್ಗೀಕರಣ:**

ವಿಭಾಗವಾರು ಅರಣ್ಯ ರಕ್ಷಕರ ಖಾಲಿ ಹುದ್ದೆಗಳ ಮೀಸಲಾತಿ ವರ್ಗೀಕರಣ ಈ ಕೆಳಗಿನಂತಿದೆ:

2.1. **<u>ಅರಣ್ಯ ರಕ್ಷಕ ಹುದ್ದೆ</u>: 240 ಹುದ್ದೆಗಳ ಮೀಸಲಾತಿ ವರ್ಗೀಕರಣ:**

2.1.1. **ಹುಲಿ ಸಂರಕ್ಷಿತ ಪ್ರದೇಶ, ಬಂಡೀಪುರದ 15 ಹುದ್ದೆಗಳ ಮೀಸಲಾತಿ ವರ್ಗೀಕರಣ:**

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | 4 | 1 | 1 | - | 2 | - | **8** |
| ಪರಿಶಿಷ್ಠ ಜಾತಿ | 2 | - | - | 1 | - | - | **3** |
| ಪ್ರವರ್ಗ-II(ಎ) | 1 | - | - | 1 | - | - | **2** |
| ಪ್ರವರ್ಗ-III(ಎ) | - | 1 | - | - | - | - | **1** |
| ಪ್ರವರ್ಗ-III(ಬಿ) | 1 | - | - | - | - | - | **1** |
| ಒಟ್ಟು: | **8** | **2** | **1** | **2** | **2** | **-** | **15** |

2.1.2. ಬಿ.ಆರ್.ಟಿ. ಹುಲಿ ಸಂರಕ್ಷಿತ ಪ್ರದೇಶ, ಚಾಮರಾಜನಗರದ 20 ಹುದ್ದೆಗಳ ಮೀಸಲಾತಿ ವರ್ಗೀಕರಣ:

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | 5 | 1 | – | 1 | 2 | 1 | **10** |
| ಪರಿಶಿಷ್ಠ ಜಾತಿ | 1 | – | – | – | 1 | – | **2** |
| ಪರಿಶಿಷ್ಠ ಪಂಗಡ | – | – | – | – | 1 | – | **1** |
| ಪ್ರವರ್ಗ–I | 1 | – | – | – | – | – | **1** |
| ಪ್ರವರ್ಗ–II(ಎ) | 2 | – | – | – | 1 | – | **3** |
| ಪ್ರವರ್ಗ–II(ಬಿ) | – | – | 1 | – | – | – | **1** |
| ಪ್ರವರ್ಗ–III(ಎ) | – | – | – | – | 1 | – | **1** |
| ಪ್ರವರ್ಗ–III(ಬಿ) | – | – | 1 | – | – | – | **1** |
| **ಒಟ್ಟು:** | **9** | **1** | **2** | **1** | **6** | **1** | **20** |

2.1.3. ಕಾವೇರಿ ವನ್ಯಜೀವಿ ವಿಭಾಗ, ಕೊಳ್ಳೇಗಾಲ 25 ಹುದ್ದೆಗಳ ಮೀಸಲಾತಿ ವರ್ಗೀಕರಣ:

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | 5 | 1 | 2 | 1 | 3 | 1 | **13** |
| ಪರಿಶಿಷ್ಠ ಜಾತಿ | 3 | – | – | – | 1 | – | **4** |
| ಪರಿಶಿಷ್ಠ ಪಂಗಡ | 1 | – | – | – | – | – | **1** |
| ಪ್ರವರ್ಗ–I | 1 | – | – | – | – | – | **1** |
| ಪ್ರವರ್ಗ–II(ಎ) | 2 | – | – | – | 1 | – | **3** |
| ಪ್ರವರ್ಗ–II(ಬಿ) | 1 | – | – | – | – | – | **1** |
| ಪ್ರವರ್ಗ–III(ಎ) | 1 | – | – | – | – | – | **1** |
| ಪ್ರವರ್ಗ–III(ಬಿ) | 1 | – | – | – | – | – | **1** |
| **ಒಟ್ಟು:** | **15** | 1 | **2** | **1** | **5** | **1** | **25** |

2.1.4. ಭದ್ರಾ ಹುಲಿ ಸಂರಕ್ಷಿತ ಪ್ರದೇಶ, ಚಿಕ್ಕಮಗಳೂರು 5 ಹುದ್ದೆಗಳ ಮೀಸಲಾತಿ ವರ್ಗೀಕರಣ:

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | 2 | 1 | – | – | – | – | **3** |
| ಪರಿಶಿಷ್ಠ ಜಾತಿ | 1 | – | – | – | – | – | **1** |
| ಪ್ರವರ್ಗ–III(ಬಿ) | 1 | – | – | – | – | – | **1** |
| **ಒಟ್ಟು:** | **4** | **1** | – | – | – | – | **5** |

2.1.5. ಕುದುರೆಮುಖ ವನ್ಯಜೀವಿ ವಿಭಾಗ, ಕಾರ್ಕಳ 5 ಹುದ್ದೆಗಳ ಮೀಸಲಾತಿ ವರ್ಗೀಕರಣ:

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | 2 | – | – | – | 1 | – | **3** |
| ಪ್ರವರ್ಗ–I | – | – | – | – | 1 | – | **1** |

KARNATAKA FOREST DEPARTMENT

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಪ್ರವರ್ಗ–II(ಎ) | – | – | – | – | 1 | – | **1** |
| ಒಟ್ಟು: | **2** | – | – | – | **3** | – | **5** |

2.1.6. ವನ್ಯಜೀವಿ ಉಪ ವಿಭಾಗ, ರಾಣೆಬೆನ್ನೂರು 2 ಹುದ್ದೆಗಳ ಮೀಸಲಾತಿ ವರ್ಗೀಕರಣ:

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | 1 | – | – | – | – | – | **1** |
| ಪರಿಶಿಷ್ಠ ಜಾತಿ | 1 | – | – | – | – | – | **1** |
| ಒಟ್ಟು: | **2** | – | – | – | – | – | **2** |

2.1.7. ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ, ಹುಣಸೂರು 20 ಹುದ್ದೆಗಳ ಮೀಸಲಾತಿ ವರ್ಗೀಕರಣ:

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | 5 | 1 | – | – | 3 | 1 | **10** |
| ಪರಿಶಿಷ್ಠ ಜಾತಿ | 2 | – | – | – | 1 | – | **3** |
| ಪ್ರವರ್ಗ–I | 1 | – | – | – | – | – | **1** |
| ಪ್ರವರ್ಗ–II(ಎ) | 2 | – | – | – | 1 | – | **3** |
| ಪ್ರವರ್ಗ–II(ಬಿ) | 1 | – | – | – | – | – | **1** |
| ಪ್ರವರ್ಗ–III(ಎ) | 1 | – | – | – | – | – | **1** |
| ಪ್ರವರ್ಗ–III(ಬಿ) | – | – | – | – | 1 | – | **1** |
| ಒಟ್ಟು: | **12** | **1** | – | – | **6** | **1** | **20** |

2.1.8. ಅಣಶಿ–ದಾಂಡೇಲಿ ಹುಲಿ ಸಂರಕ್ಷಿತ ಪ್ರದೇಶ, ದಾಂಡೇಲಿ 10 ಹುದ್ದೆಗಳ ಮೀಸಲಾತಿ ವರ್ಗೀಕರಣ:

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | 2 | – | 1 | – | 2 | – | **5** |
| ಪರಿಶಿಷ್ಠ ಜಾತಿ | – | – | – | – | – | 1 | **1** |
| ಪ್ರವರ್ಗ–II(ಎ) | – | – | – | – | 1 | 1 | **2** |
| ಪ್ರವರ್ಗ–II(ಬಿ) | – | – | 1 | – | – | – | **1** |
| ಪ್ರವರ್ಗ–III(ಬಿ) | – | – | 1 | – | – | – | **1** |
| ಒಟ್ಟು: | **2** | – | **3** | – | **3** | **2** | **10** |

2.1.9. ರಾಷ್ಟ್ರೀಯ ಉದ್ಯಾನವನ, ಬನ್ನೇರುಘಟ್ಟ 5 ಹುದ್ದೆಗಳ ಮೀಸಲಾತಿ ವರ್ಗೀಕರಣ:

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | 1 | 1 | – | – | 1 | – | **3** |

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಪ್ರವರ್ಗ-II(ಎ) | – | – | – | – | 1 | – | **1** |
| ಪ್ರವರ್ಗ-III(ಬಿ) | 1 | – | – | – | – | – | **1** |
| **ಒಟ್ಟು** | **2** | **1** | – | – | **2** | – | **5** |

2.1.10. ವನ್ಯಜೀವಿ ವಿಭಾಗ, ಮೈಸೂರು 3 ಹುದ್ದೆಗಳ ಮೀಸಲಾತಿ ವರ್ಗೀಕರಣ:

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | 1 | – | – | – | 1 | – | **2** |
| ಪ್ರವರ್ಗ-II(ಎ) | 1 | – | – | – | – | – | **1** |
| **ಒಟ್ಟು:** | **2** | – | – | – | **1** | – | **3** |

2.1.11. ವನ್ಯಜೀವಿ ವಿಭಾಗ, ಶಿವಮೊಗ್ಗ 20 ಹುದ್ದೆಗಳ ಮೀಸಲಾತಿ ವರ್ಗೀಕರಣ:

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | 5 | 1 | 1 | – | 3 | – | **10** |
| ಪರಿಶಿಷ್ಟ ಜಾತಿ | 1 | 1 | – | – | 1 | – | **3** |
| ಪ್ರವರ್ಗ-I | – | – | – | – | 1 | – | **1** |
| ಪ್ರವರ್ಗ-II(ಎ) | 1 | 1 | – | – | 1 | – | **3** |
| ಪ್ರವರ್ಗ-II(ಬಿ) | – | – | – | – | 1 | – | **1** |
| ಪ್ರವರ್ಗ-III(ಎ) | 1 | – | – | – | – | – | **1** |
| ಪ್ರವರ್ಗ-III(ಬಿ) | – | – | – | – | 1 | – | **1** |
| **ಒಟ್ಟು:** | **8** | **3** | **1** | – | **8** | – | **20** |

2.1.12. ಮಲೈ ಮಹದೇಶ್ವರ ವನ್ಯಜೀವಿ ವಿಭಾಗ, ಕೊಳ್ಳೇಗಾಲ 30 ಹುದ್ದೆಗಳ ಮೀಸಲಾತಿ ವರ್ಗೀಕರಣ:

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | 8 | 2 | – | 1 | 3 | 1 | **15** |
| ಪರಿಶಿಷ್ಟ ಜಾತಿ | 2 | 1 | – | – | 1 | – | **4** |
| ಪರಿಶಿಷ್ಟ ಪಂಗಡ | – | – | – | – | 1 | – | **1** |
| ಪ್ರವರ್ಗ-I | 1 | – | – | – | 1 | – | **2** |
| ಪ್ರವರ್ಗ-II(ಎ) | 2 | 1 | – | – | 1 | – | **4** |
| ಪ್ರವರ್ಗ-II(ಬಿ) | – | – | – | – | 1 | – | **1** |
| ಪ್ರವರ್ಗ-III(ಎ) | – | – | – | – | 1 | – | **1** |
| ಪ್ರವರ್ಗ-III(ಬಿ) | – | – | 1 | – | 1 | – | **2** |
| **ಒಟ್ಟು:** | **13** | **4** | **1** | **1** | **10** | **1** | **30** |

KARNATAKA FOREST DEPARTMENT

2.1.13. ವನ್ಯಜೀವಿ ವಿಭಾಗ, ಮಡಿಕೇರಿ 25 ಹುದ್ದೆಗಳ ಮೀಸಲಾತಿ ವರ್ಗೀಕರಣ:

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | 7 | 1 | 1 | 1 | 2 | – | **12** |
| ಪರಿಶಿಷ್ಟ ಜಾತಿ | 2 | – | – | – | 2 | – | **4** |
| ಪರಿಶಿಷ್ಟ ಪಂಗಡ | 1 | – | – | – | – | – | **1** |
| ಪ್ರವರ್ಗ–I | – | – | – | – | 1 | – | **1** |
| ಪ್ರವರ್ಗ–II(ಎ) | 2 | – | – | – | 2 | – | **4** |
| ಪ್ರವರ್ಗ–II(ಬಿ) | 1 | – | – | – | – | – | **1** |
| ಪ್ರವರ್ಗ–III(ಎ) | 1 | – | – | – | – | – | **1** |
| ಪ್ರವರ್ಗ–III(ಬಿ) | 1 | – | – | – | – | – | **1** |
| **ಒಟ್ಟು:** | **15** | **1** | **1** | **1** | **7** | **–** | **25** |

2.1.14. ಹುಣಸೂರು ವಿಭಾಗದ 5 ಹುದ್ದೆಗಳ ಮೀಸಲಾತಿ ವರ್ಗೀಕರಣ:

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | – | – | – | – | 1 | 1 | **2** |
| ಪರಿಶಿಷ್ಟ ಜಾತಿ | 1 | – | – | – | – | – | **1** |
| ಪ್ರವರ್ಗ–II(ಎ) | 2 | – | – | – | – | – | **2** |
| **ಒಟ್ಟು:** | **3** | – | – | – | **1** | **1** | **5** |

2.1.15. ಮಡಿಕೇರಿ ವಿಭಾಗದ 25 ಹುದ್ದೆಗಳ ಮೀಸಲಾತಿ ವರ್ಗೀಕರಣ:

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | 6 | 1 | 1 | 1 | 3 | 1 | **13** |
| ಪರಿಶಿಷ್ಟ ಜಾತಿ | 2 | – | – | – | 1 | – | **3** |
| ಪರಿಶಿಷ್ಟ ಪಂಗಡ | – | – | – | – | 1 | – | **1** |
| ಪ್ರವರ್ಗ–I | – | – | 1 | – | – | – | **1** |
| ಪ್ರವರ್ಗ–II(ಎ) | 2 | – | – | – | 1 | – | **3** |
| ಪ್ರವರ್ಗ–II(ಬಿ) | – | – | 1 | – | – | – | **1** |
| ಪ್ರವರ್ಗ–III(ಎ) | – | – | – | – | 1 | – | **1** |
| ಪ್ರವರ್ಗ–III(ಬಿ) | – | – | 1 | – | 1 | – | **2** |
| **ಒಟ್ಟು:** | **10** | **1** | **4** | **1** | **8** | **1** | **25** |

2.1.16. ವಿರಾಜಪೇಟೆ ವಿಭಾಗದ 25 ಹುದ್ದೆಗಳ ಮೀಸಲಾತಿ ವರ್ಗೀಕರಣ:

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | 7 | 1 | 1 | – | 4 | – | **13** |
| ಪರಿಶಿಷ್ಟ ಜಾತಿ | 1 | – | – | – | 1 | 1 | **3** |

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಪರಿಶಿಷ್ಠ ಪಂಗಡ | 1 | – | – | – | – | – | 1 |
| ಪ್ರವರ್ಗ–I | 1 | – | – | – | – | – | 1 |
| ಪ್ರವರ್ಗ–II(ಎ) | 1 | – | – | – | 1 | 1 | 3 |
| ಪ್ರವರ್ಗ–II(ಬಿ) | 1 | – | – | – | – | – | 1 |
| ಪ್ರವರ್ಗ–III(ಎ) | – | – | 1 | – | – | – | 1 |
| ಪ್ರವರ್ಗ–III(ಬಿ) | 1 | – | 1 | – | – | – | 2 |
| ಒಟ್ಟು: | 13 | 1 | 3 | – | 6 | 2 | 25 |

**ವಿಶೇಷ ಸೂಚನೆ:** ಸರ್ಕಾರಿ ಅಧಿಸೂಚನೆ ಸಂಖ್ಯೆ ಡಿಪಿಎಆರ್ 52 ಎಸ್‌ಆರ್‌ಆರ್ 99 ದಿನಾಂಕ 29–11–2002 ರ ಪ್ರಕಾರ ಅರಣ್ಯ ರಕ್ಷಕ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಅಭ್ಯರ್ಥಿಗಳನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಅಂಗವಿಕಲ ಅಭ್ಯರ್ಥಿಗಳಿಗೆ ಮೀಸಲಾಗಿರುವ ಮೀಸಲಾತಿಯಡಿಯಲ್ಲಿ ಕುಷ್ಠರೋಗದಿಂದ ಗುಣಮುಖರಾಗಿರುವ ಅಭ್ಯರ್ಥಿಗಳನ್ನು ಮಾತ್ರ ಭರ್ತಿ ಮಾಡಲು ಅವಕಾಶವಿರುತ್ತದೆ. ಕುಷ್ಠರೋಗದಿಂದ ಗುಣಮುಖರಾಗಿರುವ ಅಭ್ಯರ್ಥಿಗಳಿಗೆ ಯಾವುದೇ ವಿದಧ ಅಂಗವಿಕಲತೆ ಇರಬಾರದು.

**ವಿವರಣೆ:** "ಕುಷ್ಠರೋಗದಿಂದ ಗುಣಮುಖರಾಗಿರುವವರು (Leprosy cured)" ಎಂದರೆ ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರಲ್ಲಿ ಅರ್ಥೈಸಿರುವಂತಾಗಿದೆ. ಈ ಪದದ ಅರ್ಥ ವಿವರಣೆ ಈ ಕೆಳಕಂಡಂತಿದೆ:
Leprosy cured means any person who has been cured of leprosy but is suffering from

(i) loss of sensation in hands or feet as well as loss of sensation and paresis in the eye and eye-lid but with no manifest deformity;
(ii) manifest deformity and paresis but having sufficient mobility in their hands and feet to enable them to engage in normal economic activity;
(iii) extreme physical deformity as well as advanced age which prevents him from undertaking any gainful occupation;

and the expression "leprosy cured" shall be construed accordingly.

3. **ಅರ್ಹತೆ ಮತ್ತು ನಿಬಂಧನೆಗಳು:**

3.1. **ವಿದ್ಯಾರ್ಹತೆ:** ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಈ ಕೆಳಕಂಡ ವಿದ್ಯಾರ್ಹತೆಯನ್ನು ಅಭ್ಯರ್ಥಿಯು ಹೊಂದಿರಬೇಕು.

| | |
|---|---|
| **ಅರಣ್ಯ ರಕ್ಷಕ ಹುದ್ದೆ:** | 2ನೇ ಪಿ.ಯು..ಸಿ. / 12ನೇ ತರಗತಿಯಲ್ಲಿ ತೇರ್ಗಡೆಯಾಗಿರಬೇಕು. |

3.2. **ವಯೋಮಿತಿ:**

ಅಧಿಸೂಚನೆಯ ದಿನಾಂಕಕ್ಕೆ ಅಭ್ಯರ್ಥಿಯು ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.
ಅಧಿಸೂಚನೆಯ ದಿನಾಂಕಕ್ಕೆ ಗರಿಷ್ಠ ವಯೋಮಿತಿ ವಿವರಗಳು ಕೆಳಗಿನಂತಿದೆ:

| | | |
|---|---|---|
| 3.2.1 | ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ ಮತ್ತು ಪ್ರವರ್ಗ–I | ಗರಿಷ್ಠ ವಯೋಮಿತಿ 32 ವರ್ಷಗಳು |
| | ಪ್ರವರ್ಗ IIಎ, IIಬಿ, IIIಎ, IIIಬಿ | ಗರಿಷ್ಠ ವಯೋಮಿತಿ 30 ವರ್ಷಗಳು |
| | ಸಾಮಾನ್ಯ ಅರ್ಹತೆ | ಗರಿಷ್ಠ ವಯೋಮಿತಿ 27 ವರ್ಷಗಳು |

3.2.2 **ಅರಣ್ಯ ಪ್ರೇರಕರಿಗೆ ವಯೋಮಿತಿ:** ಅಧಿಸೂಚನೆ ದಿನಾಂಕಕ್ಕೆ ಅರಣ್ಯ ಇಲಾಖೆಯಲ್ಲಿ ಕನಿಷ್ಠ 5 ವರ್ಷಗಳ ಸೇವೆಯನ್ನು ಅರಣ್ಯ ಪ್ರೇರಕರಾಗಿ ಪೂರೈಸಿದ್ದು ಪ್ರಸ್ತುತ ಅರಣ್ಯ ಪ್ರೇರಕರಾಗಿ ಸೇವೆಯಲ್ಲಿ ಇದ್ದು ನಿಶ್ಚಿತ ಗೌರವಧನವನ್ನು ಪಡೆಯುತ್ತಿರುವ ಅರಣ್ಯ ಪ್ರೇರಕರಿಗೆ ಮಾತ್ರ ಈ ಕೆಳಗಿನ ಗರಿಷ್ಠ ವಯೋಮಿತಿ ಅನ್ವಯವಾಗುವುದು.

| | |
|---|---|
| ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ ಮತ್ತು ಪ್ರವರ್ಗ– I | ಗರಿಷ್ಠ ವಯೋಮಿತಿ 43 ವರ್ಷಗಳು |
| ಪ್ರವರ್ಗ IIಎ, IIಬಿ, IIIಎ, IIIಬಿ | ಗರಿಷ್ಠ ವಯೋಮಿತಿ 41 ವರ್ಷಗಳು |
| ಸಾಮಾನ್ಯ ಅರ್ಹತೆ | ಗರಿಷ್ಠ ವಯೋಮಿತಿ 38 ವರ್ಷಗಳು |

3.2.3 **ದಿನಗೂಲಿ ನೌಕರರಿಗೆ ವಯೋಮಿತಿ:** ದಿನಾಂಕ 01–07–1984 ರಿಂದ 29–01–1990ರ ಒಳಗೆ ದಿನಗೂಲಿ ನೌಕರರಾಗಿ ಅರಣ್ಯ ಇಲಾಖೆಯಲ್ಲಿ ಸೇವೆಗೆ ಸೇರಿದ್ದು, ಮಸ್ಟರ್ ರೋಲ್ ಅಡಿಯಲ್ಲಿ ದಿನಗೂಲಿ ನೌಕರರಾಗಿ ಈಗಲೂ ಸೇವೆಯಲ್ಲಿ ಮುಂದುವರೆಯುತ್ತಿರುವ ದಿನಗೂಲಿ ನೌಕರರಿಗೆ ಮಾತ್ರ ಈ ಕೆಳಗಿನ ಗರಿಷ್ಠ ವಯೋಮಿತಿ ಅನ್ವಯವಾಗುವುದು.

| | |
|---|---|
| ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ ಮತ್ತು ಪ್ರವರ್ಗ– I | ಗರಿಷ್ಠ ವಯೋಮಿತಿ 43 ವರ್ಷಗಳು |
| ಪ್ರವರ್ಗ IIಎ, IIಬಿ, IIIಎ, IIIಬಿ | ಗರಿಷ್ಠ ವಯೋಮಿತಿ 41 ವರ್ಷಗಳು |
| ಸಾಮಾನ್ಯ ಅರ್ಹತೆ | ಗರಿಷ್ಠ ವಯೋಮಿತಿ 38 ವರ್ಷಗಳು |

| | | |
|---|---|---|
| 3.2.4 | <u>ಮಾಜಿ ಸೈನಿಕರಿಗೆ ವಯೋಮಿತಿ</u>: | ಸಶಸ್ತ್ರ ಪಡೆಗಳಲ್ಲಿ ಸೇವೆ ಸಲ್ಲಿಸಿ ನಿಯಮಾನುಸಾರ ನಿವೃತ್ತಿ / ಡಿಮೊಬಿಲೈಸೇಷನ್ (Demobilisation) ಅಥವಾ ರಿಟ್ರೆಂಚ್‌ಮೆಂಟ್ (Retrenchment) ಹೊಂದಿದ ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅವರು ಯಾವ ಪ್ರವರ್ಗಕ್ಕೆ ಸೇರಿರುತ್ತಾರೆಯೊ ಆ ಪ್ರವರ್ಗಕ್ಕೆ ಮೇಲಿನ ಸಂಖ್ಯೆ: **3.2.1** ರಲ್ಲಿ ನಿಗದಿಪಡಿಸಿದ ಗರಿಷ್ಠ ವಯೋಮಿತಿಗೆ ಅವರು ಎಷ್ಟು ವರ್ಷ ಸಶಸ್ತ್ರ ಪಡೆಗಳಲ್ಲಿ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳಿಗೆ ಮೂರು (3) ವರ್ಷ ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು. |

**ವಿವರಣೆ: "**ಮಾಜಿ ಸೈನಿಕ" ಎಂದರೆ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿ ಅರ್ಥೈಸಿರುವಂತಾಗಿದೆ. ಈ ಪದದ ಅರ್ಥ ವಿವರಣೆ ಈ ಕೆಳಕಂಡಂತಿದೆ:

**ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 2(1)(i):**

**"Ex-Serviceman"** means a person, who has served in any rank (whether as a combatant or as non-combatant) in the regular Army, Navy and Air Force of the Union but does not include a person who has served in the Defence Security Corps, the General Reserve Engineering Force, the Lok Sahayak Sena and the Para Military Force; and

(a) who has retired from such service after earning his pension; or

(b) who has been released from such service on medical grounds attributable to military service or circumstances beyond his control and awarded medical or other disability pension; or

(c) who has been released otherwise than on his own request from such service as a result of reduction in establishment; or

(d) who has been released from such service after completing the specific period of engagement otherwise than at his own request or by way of dismissal or discharge on account of misconduct or inefficiency and has been given a gratuity;

and includes personnel of the Territorial Army of the following categories, namely:-

(i) Pension holders for continuous embodied service;

(ii) Persons with disability attributable to military service; and

(iii) Gallantry award winners.

**Explanation:** The persons serving in the armed forces of the union, who on retirement from service, would come under the category of "Ex-Serviceman" may be permitted to apply for re-employment one year before the completion of the specified terms of engagement and avail themselves of all concessions available to ex-servicemen, but shall not be appointed to a State Civil Service or Post until they are permitted to leave the uniform.

4. **ಸ್ವೀಕೃತ ಅರ್ಜಿಗಳ ಪರಾಮರ್ಶೆ/ನೇಮಕಾತಿ ವಿಧಾನ:**
ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2012ರ ಅನ್ವಯ ಅರಣ್ಯ ಇಲಾಖೆಯಲ್ಲಿ ಖಾಲಿ ಇರುವ ಒಟ್ಟು ಹುದ್ದೆಗಳನ್ನು ಪರಿಗಣನೆಗೆ ತೆಗೆದುಕೊಂಡು ಮತ್ತು ಸರ್ಕಾರವು ಪ್ರಸ್ತುತ ನೇರ ನೇಮಕಾತಿ ಮೂಲಕ ತುಂಬಲು ಅನುಮೋದನೆ ನೀಡಿರುವ ಹುದ್ದೆಗಳ ಸಂಖ್ಯೆಗನುಗುಣವಾಗಿ ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಾನುಸಾರ ಅರಣ್ಯ ರಕ್ಷಕ ಹುದ್ದೆಗೆ ವಿಭಾಗವಾರು ಮೀಸಲಾತಿ ವರ್ಗೀಕರಣ ಮಾಡಲಾಗಿದೆ. ಅರಣ್ಯ ರಕ್ಷಕ ಹುದ್ದೆಗೆ ಸ್ವೀಕರಿಸಲಾಗುವ ಎಲ್ಲಾ ಅರ್ಹ ಅರ್ಜಿಗಳನ್ನು ರಾಜ್ಯಮಟ್ಟದಲ್ಲಿ ಕ್ರೋಢೀಕರಿಸಿ, ಆನ್‌ಲೈನ್ ಅರ್ಜಿಯಲ್ಲಿ ಭರ್ತಿ ಮಾಡಿರುವ ಮಾಹಿತಿ/ವಿವರಗಳ ಆಧಾರದ ಅನ್ವಯ ಅರಣ್ಯ ರಕ್ಷಕ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಅಭ್ಯರ್ಥಿಗಳು ಗಳಿಸಿದ ಶೇಕಡವಾರು ಅಂಕಗಳ ಮೆರಿಟ್ ಆಧಾರದಲ್ಲಿ ಮೀಸಲಾತಿ ಪ್ರವರ್ಗವಾರು 1:20 (ಖಾಲಿ ಹುದ್ದೆ:ಅಭ್ಯರ್ಥಿ) ಅನುಪಾತದಲ್ಲಿ ಮೂಲ ದಾಖಲೆಗಳ ಪರಿಶೀಲನೆ, ದೇಹದಾರ್ಢ್ಯತೆ, ದೈಹಿಕ ತಾಳ್ವಿಕೆ ಮತ್ತು ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗೆ ಹಾಜರಾಗಲು ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. 1:20 (ಹುದ್ದೆ/ಅಭ್ಯರ್ಥಿ) ಅನುಪಾತದ ಪಟ್ಟಿಯನ್ನು ಇಲಾಖಾ ವೆಬ್‌ಸೈಟ್: www.aranya.gov.in ನಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಪಡಿಸಲಾಗುವುದು ಹಾಗೂ 1:20 (ಹುದ್ದೆ/ಅಭ್ಯರ್ಥಿ) ಅರ್ಹ ಅಭ್ಯರ್ಥಿಗಳು ತಮ್ಮ ಪ್ರವೇಶ ಪತ್ರವನ್ನು ಇಲಾಖಾ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡುವುದು. ಇದನ್ನು ಹೊರತುಪಡಿಸಿ ಅಂಚೆ ಮುಖಾಂತರ ಪ್ರವೇಶ ಪತ್ರವನ್ನು ಕಳುಹಿಸಲಾಗುವುದಿಲ್ಲ.

**ವಿಶೇಷ ಸೂಚನೆ:** ಶೇಕಡಾವಾರು ಅಂಕಗಳನ್ನು ಲೆಕ್ಕ ಹಾಕುವಾಗ ಪಠ್ಯ ವಿಷಯದಲ್ಲಿನ ಯಾವುದೇ ವಿಷಯದ ಅಂಕಗಳನ್ನು ಹೊರತುಪಡಿಸಲಾಗುವುದಿಲ್ಲ (ಭಾಷಾ ವಿಷಯಗಳನ್ನೊಳಗೊಂಡಂತೆ) ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಅಭ್ಯರ್ಥಿಯು ಗಳಿಸಿರುವ ಎಲ್ಲಾ ವಿಷಯಗಳಲ್ಲಿನ ಒಟ್ಟು ಅಂಕಗಳು ಮತ್ತು ಆಯಾ ಪರೀಕ್ಷಾ ಮಂಡಳಿ ನಿಗದಿಪಡಿಸಿರುವ ಗರಿಷ್ಠ ಅಂಕಗಳನ್ನು ಪರಿಗಣಿಸಿ ಅಭ್ಯರ್ಥಿಗಳ ಶೇಕಡವಾರು ಅಂಕಗಳನ್ನು ನಿಗದಿಪಡಿಸಲಾಗುವುದು.

1:20 (ಹುದ್ದೆ/ಅಭ್ಯರ್ಥಿ) ಅನುಪಾತದ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ಮೂಲ ದಾಖಲೆ / ಪ್ರಮಾಣ ಪತ್ರಗಳ ಪರಿಶೀಲನೆ, ದೇಹದಾರ್ಢ್ಯತೆ ದೈಹಿಕ ತಾಳ್ವಿಕೆ ಮತ್ತು ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗಳಿಗೆ ಸೂಚಿತ ದಿನಾಂಕದಂದು ಹಾಜರಾಗಲು ತಿಳಿಸಲಾಗುವುದು. ಸದರಿ ಸೂಚಿತ ದಿನಾಂಕದಂದು 1:20 ಪಟ್ಟಿಯಲ್ಲಿರುವ ಅಭ್ಯರ್ಥಿಗಳು ಮೂಲ ದಾಖಲೆ / ಪ್ರಮಾಣ ಪತ್ರಗಳನ್ನು (ಎಸ್.ಎಸ್.ಎಲ್.ಸಿ ಅಂಕಪಟ್ಟಿ / ಶಾಲಾ ದಾಖಲಾತಿ ಪ್ರಮಾಣ ಪತ್ರಗಳು / ಶೈಕ್ಷಣಿಕ ಅರ್ಹತೆ / ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ / ಕನ್ನಡ ಮಾಧ್ಯಮ ಪ್ರಮಾಣ ಪತ್ರ / ಯೋಜನಾ ನಿರಾಶ್ರಿತ ಪ್ರಮಾಣ ಪತ್ರ / ಕುಷ್ಠರೋಗದಿಂದ ಗುಣಮುಖ ಹೊಂದಿದ ಪ್ರಮಾಣ ಪತ್ರ / ಮಾಜಿ ಸೈನಿಕ ಪ್ರಮಾಣ ಪತ್ರ) ಇವುಗಳನ್ನು ಮತ್ತು ಅವುಗಳ ಒಂದು ಜೆರಾಕ್ಸ್ ಪ್ರತಿಯೊಂದಿಗೆ ಪರಿಶೀಲನೆಗಾಗಿ ಸಂಬಂಧಿಸಿದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಪ್ರಾದೇಶಿಕ ಪರೀಕ್ಷಕರ ಎದುರು ಹಾಜರುಪಡಿಸಬೇಕು. ಮೂಲ ದಾಖಲೆ / ಪ್ರಮಾಣ ಪತ್ರಗಳ ಪರಿಶೀಲನೆಯಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ / ವೆಬ್‌ಸೈಟ್‌ಗೆ ಅಪ್‌ಲೋಡ್ ಮಾಡಿರುವ ಮಾಹಿತಿ / ಮೂಲ ದಾಖಲೆಗಳ ಪರಿಶೀಲನಾ ವೇಳೆ ಹಾಜರು ಪಡಿಸುವ ದಾಖಲೆಗಳಲ್ಲಿ ಯಾವುದೇ ರೀತಿಯ ಗೊಂದಲ / ವ್ಯತಿರಿಕ್ತ ದಾಖಲೆ / ಪ್ರಮಾಣ ಪತ್ರಗಳನ್ನು ಸಲ್ಲಿಸಿದ್ದಲ್ಲಿ ಅಂತಹ ದಾಖಲೆ / ಪ್ರಮಾಣ ಪತ್ರಗಳನ್ನು ಪರಿಗಣನೆಗೆ ತೆಗೆದುಕೊಂಡು ಅರ್ಜಿಯಲ್ಲಿನ ಮಾಹಿತಿಯನ್ನು ಬದಲಾವಣೆ ಮಾಡಲಾಗುವುದಿಲ್ಲ. ಅರ್ಜಿ ಸಲ್ಲಿಸುವಾಗ ಅಭ್ಯರ್ಥಿಯು ಎಲ್ಲಾ ದಾಖಲೆಗಳನ್ನು ಪಡೆದಿಟ್ಟುಕೊಂಡು ಅರ್ಜಿಯನ್ನು ಸಲ್ಲಿಸತಕ್ಕದ್ದು, ಒಂದು ವೇಳೆ ಅರ್ಜಿಯಲ್ಲಿ ನಮೂದಿಸಿರುವ ದಾಖಲೆಗಳನ್ನು ಸಲ್ಲಿಸಲು ವಿಫಲರಾದಲ್ಲಿ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು. ಮೂಲ ದಾಖಲೆ / ಪ್ರಮಾಣ ಪತ್ರಗಳನ್ನು ಪರಿಶೀಲನೆ ಸಮಯದಲ್ಲಿ ಹಾಜರುಪಡಿಸದ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು ಹಾಗೂ ಅವರನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು. ಅಭ್ಯರ್ಥಿಯು ಎಲ್ಲಾ ಸಂಧರ್ಭದಲ್ಲಿ ಒಂದೇ ತರಹದ ದಾಖಲೆಗಳನ್ನು ಸಲ್ಲಿಸತಕ್ಕದ್ದು, ಈ ಬಗ್ಗೆ ಅಭ್ಯರ್ಥಿ ಬಹಳ ಎಚ್ಚರಿಕೆ ವಹಿಸಲು ಸೂಚಿಸಿದೆ. ವಿಭಿನ್ನ ಮಾಹಿತಿಯನ್ನು ಸಲ್ಲಿಸಿದ್ದಲ್ಲಿ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು.

ಮೂಲ ದಾಖಲೆಗಳ ಪರಿಶೀಲನೆಯಲ್ಲಿ ಅರ್ಹರಾದ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅನುಮತಿ ನೀಡಲಾಗುವುದು. ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದವರು ಮಾತ್ರ ಮುಂದಿನ ಹಂತದ ದೈಹಿಕ ತಾಳ್ವಿಕೆ ಪರೀಕ್ಷೆಗೆ ಅರ್ಹತೆ ಹೊಂದುತ್ತಾರೆ. ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಮಾತ್ರ ಮುಂದಿನ ಹಂತದ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗೆ ಅರ್ಹತೆ ಹೊಂದುತ್ತಾರೆ. ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಮಾತ್ರ ಮುಂದಿನ ಹಂತದ ಲಿಖಿತ Aptitude ಪರೀಕ್ಷೆಗೆ ಹಾಜರಾಗಲು ಅರ್ಹರಾಗುತ್ತಾರೆ.

ನೇಮಕಾತಿಗಾಗಿ ಇಲಾಖೆಯು ನಡೆಸುವ ಲಿಖಿತ Aptitude ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಪಡೆದ ಒಟ್ಟು ಅಂಕಗಳ ಶೇಕಡಾವಾರು ಪ್ರಮಾಣದ ಅರ್ಧ ಭಾಗ ಹಾಗೂ ಅರಣ್ಯ ರಕ್ಷಕ ಹುದ್ದೆಗೆ ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಅಭ್ಯರ್ಥಿಗಳು ಪಡೆದ ಒಟ್ಟು ಅಂಕಗಳ ಶೇಕಡಾವಾರು ಪ್ರಮಾಣದ ಅರ್ಧ ಭಾಗವನ್ನು ಕ್ರೋಢೀಕರಿಸಿ ಎಲ್ಲಾ ಅಭ್ಯರ್ಥಿಗಳ ಮೆರಿಟ್ ಅನ್ನು ರಾಜ್ಯಮಟ್ಟದಲ್ಲಿ ನಿಗದಿಪಡಿಸಲಾಗುವುದು. ಮೆರಿಟ್ ಆಧಾರದಲ್ಲಿ ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳ ಅನ್ವಯ ಅಭ್ಯರ್ಥಿಗಳನ್ನು ನೇಮಕಾತಿಗಾಗಿ ಅರಣ್ಯ ರಕ್ಷಕ ಹುದ್ದೆಗೆ ಆಯ್ಕೆ ಮಾಡಲಾಗುವುದು.

5. **ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ, ದೇಹದಾರ್ಢ್ಯತೆ, ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ ಮತ್ತು ಲಿಖಿತ ಪರೀಕ್ಷೆಗಳು:**

ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ, ದೇಹದಾರ್ಢ್ಯತೆ, ದೈಹಿಕ ತಾಳ್ವಿಕೆ, ದೈಹಿಕ ಕಾರ್ಯಸಮರ್ಥತೆ ಪರೀಕ್ಷೆ ಮತ್ತು ಲಿಖಿತ ಪರೀಕ್ಷೆಗಳನ್ನು ಸಂಬಂಧಿಸಿದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಪ್ರಾದೇಶಿಕ ಪರೀಕ್ಷಕರಿಂದ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಲ್ಲಿ ಸೂಚಿತ ದಿನಾಂಕಗಳಂದು ನಡೆಸಲಾಗುವುದು.

6. **ದೇಹದಾರ್ಢ್ಯತೆ ಪರೀಕ್ಷೆ:**

**ಶಾರೀರಿಕ ಮಾನದಂಡಗಳು (Physical Standards):**

ಶಾರೀರಿಕ ಮಾನದಂಡಗಳನ್ನು ಈ ಕೆಳಗಿನಂತೆ ನಿಗದಿಪಡಿಸಲಾಗಿದೆ.

| | | |
|---|---|---|
| **ಪುರುಷ ಅಭ್ಯರ್ಥಿಗಳಿಗೆ:** | | |
| 1 | ಎತ್ತರ | ಕನಿಷ್ಠ 163 ಸೆ.ಮೀ. |
| 2 | ಎದೆ ಸುತ್ತಳತೆ | ಸಾಮಾನ್ಯ ಸ್ಥಿತಿಯಲ್ಲಿ ಕನಿಷ್ಠ 79 ಸೆ.ಮೀ.<br>ಕನಿಷ್ಠ ಹಿಗ್ಗುವಿಕೆ: 5 ಸೆ.ಮೀ. |
| **ಮಹಿಳಾ ಅಭ್ಯರ್ಥಿಗಳಿಗೆ:** | | |
| 1 | ಎತ್ತರ | ಕನಿಷ್ಠ 150 ಸೆ.ಮೀ. |
| 2 | ಎದೆ ಸುತ್ತಳತೆ | ಸಾಮಾನ್ಯ ಸ್ಥಿತಿಯಲ್ಲಿ ಕನಿಷ್ಠ 74 ಸೆ.ಮೀ.<br>ಕನಿಷ್ಠ ಹಿಗ್ಗುವಿಕೆ 5 ಸೆ.ಮೀ. |

ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನರ್ಹರಾದ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು. ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹರಾಗುವ ಅಭ್ಯರ್ಥಿಗಳನ್ನು ಮಾತ್ರ ಮುಂದಿನ ಹಂತದ ದೈಹಿಕ ತಾಳ್ವಿಕೆ ಪರೀಕ್ಷೆಗೆ ಪರಿಣಿಸಲಾಗುವುದು.

7.1. **ದೈಹಿಕ ತಾಳ್ವಿಕೆ ಪರೀಕ್ಷೆ:**

| | | | |
|---|---|---|---|
| ಪುರುಷ ಅಭ್ಯರ್ಥಿಗಳಿಗೆ | : | 1600 ಮೀಟರ್ ಓಟ | 07 ನಿಮಿಷಗಳ ಅವಧಿಯಲ್ಲಿ ಪೂರೈಸಬೇಕು. |
| ಮಹಿಳಾ ಅಭ್ಯರ್ಥಿ ಹಾಗೂ ಮಾಜಿ ಸೈನಿಕ ಅಭ್ಯರ್ಥಿ | : | 1000 ಮೀಟರ್ ಓಟ | 06 ನಿಮಿಷಗಳ ಅವಧಿಯಲ್ಲಿ ಪೂರೈಸಬೇಕು. |

ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅನರ್ಹರಾದ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು. ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅರ್ಹರಾಗುವ ಅಭ್ಯರ್ಥಿಗಳನ್ನು ಮಾತ್ರ ಮುಂದಿನ ಹಂತದ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗೆ ಪರಿಣಿಸಲಾಗುವುದು. ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳಂತೆ ದೈಹಿಕ ತಾಳ್ವಿಕೆ ಪರೀಕ್ಷೆಗೆ ಮಾನದಂಡವನ್ನು ವಿಧಿಸಲಾಗಿರುತ್ತದೆ.

**ವಿಶೇಷ ಸೂಚನೆ:**

ಈ ದೈಹಿಕ ತಾಳ್ವಿಕೆ ಪರೀಕ್ಷೆ ನಡೆಯುವ ಸಮಯದಲ್ಲಿ ಯಾವ ನಿಯಮ ಜಾರಿಯಲ್ಲಿರುತ್ತದೆಯೋ ಅದರಂತೆ ಮಾನದಂಡ ವಿಧಿಸಲಾಗುವುದು.

### 7.2. ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆ:

| ಕ್ರ ಸಂ. | ಐಟಂ | ಅರ್ಹತಾ ಸಮಯ ಮತ್ತು ಕ್ರಮಿಸಬೇಕಾದ ದೂರ | |
|---|---|---|---|
| | | ಪುರುಷ ಅಭ್ಯರ್ಥಿಗಳಿಗೆ | ಮಹಿಳಾ ಅಭ್ಯರ್ಥಿ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆ |
| 1 | 100 ಮೀಟರ್ ಓಟ | 15 ಸೆಕೆಂಡುಗಳು | 18.5 ಸೆಕೆಂಡುಗಳು |
| 2 | ಎತ್ತರ ಜಿಗಿತ (**3 ಅವಕಾಶಗಳು ಮಾತ್ರ**) | 1.20 ಮೀಟರ್ | 0.90 ಮೀಟರ್ |
| 3 | ಉದ್ದ ಜಿಗಿತ (**3 ಅವಕಾಶಗಳು ಮಾತ್ರ**) | 3.80 ಮೀಟರ್ | 2.50 ಮೀಟರ್ |
| 4 | ಶಾಟ್‌ಪುಟ್ (**3 ಅವಕಾಶಗಳು ಮಾತ್ರ**)<br>ಪುರುಷ: 16 ಎಲ್.ಬಿ.<br>ಮಹಿಳೆ: 8 ಎಲ್.ಬಿ. | 5.60 ಮೀಟರ್ | 3.76 ಮೀಟರ್ |
| 5(ಎ) | 800 ಮೀಟರ್ ಓಟ | 2 ನಿಮಿಷ 50 ಸೆಕೆಂಡುಗಳು | -- |
| 5(ಬಿ) | 200 ಮೀಟರ್ ಓಟ | -- | 40 ಸೆಕೆಂಡುಗಳು |

ಈ ಮೇಲಿನ 5 ವಿವಿಧ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗಳ ಪೈಕಿ ಕನಿಷ್ಠ 3 ಪರೀಕ್ಷೆಗಳಲ್ಲಿ ಕಡ್ಡಾಯವಾಗಿ ತೇರ್ಗಡೆ ಹೊಂದಬೇಕು.

ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಮಾತ್ರ ಮುಂದಿನ ಹಂತದ ಲಿಖಿತ Aptitude ಪರೀಕ್ಷೆಗೆ ಹಾಜರಾಗಲು ಅರ್ಹತೆ ಪಡೆಯುತ್ತಾರೆ. ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಅನರ್ಹರಾದ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು. ಯಾವುದೇ ಹಂತದಲ್ಲಿ ದೈಹಿಕ ತಾಳ್ವಿಕೆ / ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಅನರ್ಹರಾದಲ್ಲಿ ಅಥವಾ ಪರೀಕ್ಷೆ ನಡೆಯುವ ಸಮಯದಲ್ಲಿ ಗಾಯಗೊಂಡಲ್ಲಿ ಅಥವಾ ಇನ್ನಿತರ ಯಾವುದೇ ಕಾರಣಕ್ಕಾಗಿ ಅನರ್ಹರಾದ ಅಭ್ಯರ್ಥಿಗಳಿಗೆ ಇನ್ನೊಂದು ಅವಕಾಶ ನೀಡಲಾಗುವುದಿಲ್ಲ.

### 7.3. ಲಿಖಿತ Aptitude ಪರೀಕ್ಷೆ

ಅರಣ್ಯ ರಕ್ಷಕ ಹುದ್ದೆಗೆ ಲಿಖಿತ Aptitude ಪರೀಕ್ಷೆಯನ್ನು ಆಯಾ ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಗುವುದು. ಪ್ರಶ್ನೆ ಪತ್ರಿಕೆಯು ಸದರಿ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯ ಮಟ್ಟದಲ್ಲಿದ್ದು **ಬಹು ಆಯ್ಕೆ** (objective multiple choice) ಮಾದರಿಯದ್ದಾಗಿರುತ್ತದೆ. ಲಿಖಿತ Aptitude ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ನೂರು (100) ಪ್ರಶ್ನೆಗಳನ್ನು ಒಳಗೊಂಡಿದ್ದು, ನೂರು (100) ಅಂಕಗಳದ್ದಾಗಿದ್ದು, 2 ಗಂಟೆ ಅವಧಿಯಲ್ಲಿ ಉತ್ತರಿಸಬೇಕಾಗಿದೆ.

### 7.4. ಲಿಖಿತ ಪರೀಕ್ಷೆಯ ವಿಷಯಗಳು:

Syllabus ನ್ನು ಕರ್ನಾಟಕ ಅರಣ್ಯ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರತ್ಯೇಕವಾಗಿ ಪ್ರಕಟಿಸಲಾಗುವುದು.

### 8.1.1. ಲಿಖಿತ Aptitude ಪರೀಕ್ಷಾ ಕೇಂದ್ರ:

ಲಿಖಿತ Aptitude ಪರೀಕ್ಷೆಗಳನ್ನು ಈ ಕೆಳಕಂಡ ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಗುವುದು. ಇಚ್ಛಿತ ಪರೀಕ್ಷಾ ಕೇಂದ್ರದ ವಿವರವನ್ನು ಅಭ್ಯರ್ಥಿಯು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸುವುದು. ಈ ರೀತಿ ನಮೂದಿಸಿರುವ ಪರೀಕ್ಷಾ ಕೇಂದ್ರವನ್ನು ಯಾವುದೇ ಹಂತದಲ್ಲಿಯೂ ಯಾವುದೇ ಕಾರಣಕ್ಕೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ.

1) ಬೆಂಗಳೂರು, 2) ಚಾಮರಾಜನಗರ, 3) ಚಿಕ್ಕಮಗಳೂರು, 4) ಧಾರವಾಡ, 5) ಹಾಸನ, 6) ಶಿರಸಿ,
7) ಮಡಿಕೇರಿ, 8) ಮಂಗಳೂರು, 9) ಮೈಸೂರು, 10) ಶಿವಮೊಗ್ಗ, 11) ಬೆಳಗಾವಿ, 12) ಕಲಬುರ್ಗಿ ಹಾಗೂ 13) ಬಳ್ಳಾರಿ

<u>ವಿಶೇಷ ಸೂಚನೆ:</u> ಅಭ್ಯರ್ಥಿಗಳು ನೇಮಕಾತಿ ಪರೀಕ್ಷೆಗಳಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು.

### 8.1.2. ಲಿಖಿತ Aptitude ಪರೀಕ್ಷೆ ಬರೆಯುವ ಭಾಷೆ:

ಲಿಖಿತ Aptitude ಪರೀಕ್ಷೆ ಬರೆಯಲು ಅಭ್ಯರ್ಥಿಗಳು ಕನ್ನಡ ಅಥವಾ ಆಂಗ್ಲ ಭಾಷೆಯನ್ನು ಆಯ್ದುಕೊಳ್ಳಬಹುದಾಗಿದೆ. ಅಭ್ಯರ್ಥಿಯು ಆಯ್ದುಕೊಂಡ ಪರೀಕ್ಷೆ ಬರೆಯುವ ಭಾಷೆಯನ್ನು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಬೇಕು.

8.1.3. ಎಸ್.ಎಸ್.ಎಲ್.ಸಿ. ಹಾಗೂ ಅದಕ್ಕಿಂತ ಮೇಲ್ಪಟ್ಟ ವಿದ್ಯಾಭ್ಯಾಸದಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಅಭ್ಯಸಿಸದೇ ಇರುವ ಅಭ್ಯರ್ಥಿಗಳಿಗೆ ಕರ್ನಾಟಕ ಸಿವಿಲ್ ಸೇವೆಗಳು (ನೇಮಕಾತಿ) (ಕನ್ನಡ ಭಾಷಾ ಪರೀಕ್ಷೆ) ನಿಯಮಗಳು, 1984 ಕ್ಕೆ ಪೂರಕವಾಗಿ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 69 ಎಸ್‌ಸಿಆರ್ 84 ದಿನಾಂಕ 23.09.1985 ರಲ್ಲಿ ಸೂಚಿಸಿದ ಪ್ರಕಾರ ಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನವನ್ನು ಪರೀಕ್ಷಿಸಲು ನಿಗದಿಪಡಿಸಿದ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ನಂತರವೇ ಅಭ್ಯರ್ಥಿಗಳು ನೇಮಕಾತಿ ಹೊಂದಲು ಅರ್ಹರಾಗುತ್ತಾರೆ. ಕನ್ನಡ ಭಾಷಾ ಪರೀಕ್ಷೆಯಲ್ಲಿ ಅನುತ್ತೀರ್ಣರಾಗುವ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು. ಅದರಂತೆ ಕನ್ನಡ ಭಾಷಾ ಪರೀಕ್ಷೆಯನ್ನು ನಡೆಸಲಾಗುವುದು.

8.1.4. **Medical Fitness:**

ನಿಗದಿಪಡಿಸಿದ ಹುದ್ದೆಗಳಿಗೆ ತಾತ್ಕಾಲಿಕವಾಗಿ ಆಯ್ಕೆಯಾದ ಅಭ್ಯರ್ಥಿಗಳ Medical Fitness ಪರೀಕ್ಷೆಯನ್ನು ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ Civil Surgeon / Chief Medical Officer / Medical Superintendent ರವರ ದರ್ಜೆಗಿಂತ ಕಡಿಮೆ ಇರದ ವೈದ್ಯಾಧಿಕಾರಿಗಳಿಂದ ಈ ಕೆಳಕಂಡ Medical Fitness ಪರೀಕ್ಷೆಗಳನ್ನು ಇಲಾಖಾ ಮುಖಾಂತರ ನಡೆಸಲಾಗುವುದು. ಇದಕ್ಕೆ ಹೊರತಾಗಿ ಯಾವುದೇ ವೈದ್ಯಕೀಯ ಪ್ರಮಾಣ ಪತ್ರದ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ. ಹೀಗೆ ನಡೆಸುವ Medical Fitness ಪರೀಕ್ಷೆಯಲ್ಲಿ ಅನರ್ಹಗೊಂಡ ಅಭ್ಯರ್ಥಿಗಳನ್ನು ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು ಹಾಗೂ ಸೂಚಿತ ದಿನಾಂಕದಂದು ನಡೆಸುವ Medical Fitness ಪರೀಕ್ಷೆಗೆ ಗೈರುಹಾಜರಾಗುವ ಅಭ್ಯರ್ಥಿಗಳಿಗೆ ಯಾವುದೇ ಕಾರಣಕ್ಕೂ, ಯಾವುದೇ ಸಂದರ್ಭದಲ್ಲಿಯೂ ಇನ್ನೊಂದು ಅವಕಾಶವನ್ನು ನೀಡಲಾಗುವುದಿಲ್ಲ. Medical Fitness ಪರೀಕ್ಷೆಯಲ್ಲಿ ಅರ್ಹರಾಗುವ ಅಭ್ಯರ್ಥಿಗಳನ್ನು ಮಾತ್ರ ಆಯ್ಕೆ ಮಾಡಿ ಸ್ಥಳ ಹಂಚಿಕೆ ನೀಡಲಾಗುವುದು. Medical Fitness ಪರೀಕ್ಷೆಗಳು ಈ ಕೆಳಕಂಡಂತಿರುತ್ತವೆ.

8.1.5. **ದೇಹದಾರ್ಢ್ಯತೆ ಪರೀಕ್ಷೆ (ಶಾರೀರಿಕ ಮಾನದಂಡಗಳು) (Physical Standards):**

ಈ ಕೆಳಗಿನಂತೆ ದೇಹದಾರ್ಢ್ಯತೆ (ಶಾರೀರಿಕ ಮಾನದಂಡಗಳ) ಕುರಿತು ಪರೀಕ್ಷೆಯನ್ನು ನಡೆಸಲಾಗುವುದು.

| | | |
|---|---|---|
| **ಪುರುಷ ಅಭ್ಯರ್ಥಿಗಳಿಗೆ** | | |
| 1 | ಎತ್ತರ | ಕನಿಷ್ಠ 163 ಸೆ.ಮೀ. |
| 2 | ಎದೆ ಸುತ್ತಳತೆ | ಸಾಮಾನ್ಯ ಸ್ಥಿತಿಯಲ್ಲಿ ಕನಿಷ್ಠ 79 ಸೆ.ಮೀ.<br>ಕನಿಷ್ಠ ಹಿಗ್ಗುವಿಕೆ 5 ಸೆ.ಮೀ. |
| **ಮಹಿಳಾ ಅಭ್ಯರ್ಥಿಗಳಿಗೆ** | | |
| 1 | ಎತ್ತರ | ಕನಿಷ್ಠ 150 ಸೆ.ಮೀ. |
| 2 | ಎದೆ ಸುತ್ತಳತೆ | ಸಾಮಾನ್ಯ ಸ್ಥಿತಿಯಲ್ಲಿ ಕನಿಷ್ಠ 74 ಸೆ.ಮೀ.<br>ಕನಿಷ್ಠ ಹಿಗ್ಗುವಿಕೆ 5 ಸೆ.ಮೀ. |

8.1.6. **ಕೆಳಕಂಡ ಅಂಗವಿಕಲತೆ (Physical disqualifications) ಇರುವವರು ಆಯ್ಕೆಗೆ ಅನರ್ಹರು:**

1. ತಾಗು ಮಂಡಿಗಳು (knock knees)
2. ಬಾಗಿದ ಕಾಲುಗಳು (Bow legs)
3. ಚಪ್ಪಟೆ ಪಾದ (Flat feet)
4. ನರ ಊತವಿರುವವರು (Varicose Veins)
5. Impediment in speech and hearing.
6. Hydrocele in men
7. Vision / colour blindness / night blindness

8.1.7. **ದೃಷ್ಟಿ ಸಾಮರ್ಥ್ಯ:**

ಅಭ್ಯರ್ಥಿಗಳು ಈ ಕೆಳಗೆ ನಿಗದಿಪಡಿಸಿರುವ ದೃಷ್ಟಿ ಸಾಮರ್ಥ್ಯವನ್ನು ಕನ್ನಡಕ ಸಹಿತ ಅಥವಾ ಕನ್ನಡಕ ರಹಿತ ಕಡ್ಡಾಯವಾಗಿ ಹೊಂದಿರಬೇಕು ಹಾಗೂ ದೃಷ್ಟಿ ಸಾಮರ್ಥ್ಯ ಕುರಿತು ಈ ಕೆಳಕಂಡ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಲಾಗುವುದು.

| ದೂರ ದೃಷ್ಟಿ (Distant vision) | | | ಸಮೀಪ ದೃಷ್ಟಿ (Near vision) | | |
|---|---|---|---|---|---|
| ದೋಷರಹಿತ ಕಣ್ಣು (Better eye) | ಅಥವಾ | ದೋಷಪೂರಿತ ಕಣ್ಣು (Worse eye) | ದೋಷರಹಿತ ಕಣ್ಣು (Better eye) | ಅಥವಾ | ದೋಷಪೂರಿತ ಕಣ್ಣು (Worse eye) |
| 6/6 ಮೀಟರ್ | | 6/9 ಮೀಟರ್ | 0/6 ಮೀಟರ್ | | 0/8 ಮೀಟರ್ |

ಪ್ರತಿ ಕಣ್ಣು ಸಂಪೂರ್ಣ ದೃಷ್ಟಿ ಹೊಂದಿರಬೇಕು. ವರ್ಣಾಂಧತೆ, ಮೆಳ್ಳೆಗಣ್ಣು ಅಥವಾ ಯಾವುದೇ ಕಣ್ಣಿನ ಅಥವಾ ರೆಪ್ಪೆಯ ವಿಕೃತ ಸ್ಥಿತಿಯನ್ನು ಅನರ್ಹತೆ ಎಂದು ಪರಿಗಣಿಸಲಾಗುವುದು.

8.1.8. **ಶ್ರವಣಶಕ್ತಿ:**
ಅಭ್ಯರ್ಥಿಗಳ ಶ್ರವಣ ಶಕ್ತಿಯನ್ನು ಪರೀಕ್ಷಿಸಲು ಈ ಕೆಳಕಂಡ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಲಾಗುವುದು.

1. ರಿನ್ನರ್ಸ್ ಟೆಸ್ಟ್
2. ವೆಬ್ಬರ್ಸ್ ಟೆಸ್ಟ್
3. ಟೆಸ್ಟ್ ಫಾರ್ ವರ್ಟಿಗೋ

ಮೇಲಿನ ಪರೀಕ್ಷೆಗಳಲ್ಲಿ ಯಾವುದಾದರೂ ಶ್ರವಣ ದೋಷವಿದೆಯೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳು ಆಯ್ಕೆಗೆ ಅನರ್ಹರಾಗುತ್ತಾರೆ.

9. **ನೇಮಕಾತಿ ಹೊಂದಿದ ಅಭ್ಯರ್ಥಿಗಳ ತರಬೇತಿ ಹಾಗೂ ಪರೀಕ್ಷಾರ್ಥ ಅವಧಿ:**
ಅಂತಿಮವಾಗಿ ನೇಮಕಾತಿಗೆ ಅರ್ಹರಾದ ಅಭ್ಯರ್ಥಿಗಳನ್ನು ಅಧಿಸೂಚಿಸಿರುವ ವಿಭಾಗಕ್ಕೆ ನಿಯುಕ್ತಿಗೊಳಿಸಲಾಗುವುದು.

ನೇಮಕಾತಿ ಹೊಂದಿದ ಅಭ್ಯರ್ಥಿಗಳು ಆಯಾ ಹುದ್ದೆಗೆ ನಿಗದಿಪಡಿಸಿದ ತರಬೇತಿಯನ್ನು ಯಶಸ್ವಿಯಾಗಿ ಪೂರೈಸಬೇಕಾಗಿದೆ. ನಿಗದಿಪಡಿಸಿದ ತರಬೇತಿ ಅವಧಿ ಹಾಗೂ ಪರೀಕ್ಷಾರ್ಥ ಅವಧಿಯ ವಿವರ ಕೆಳಕಂಡಂತಿದೆ.

| ಹುದ್ದೆ | ತರಬೇತಿ ಅವಧಿ | ಪರೀಕ್ಷಾರ್ಥ ಅವಧಿ (ತರಬೇತಿ ಅವಧಿ ಸೇರಿ) |
|---|---|---|
| ಅರಣ್ಯ ರಕ್ಷಕ | 9 ತಿಂಗಳು | 24 ತಿಂಗಳು |

9.1. **ನೇಮಕಾತಿ ಹೊಂದಿದ ಅಭ್ಯರ್ಥಿಗಳ ಸ್ಥಳ ನಿಯುಕ್ತಿ:**
ಪ್ರಸ್ತುತ 16 ವಿಭಾಗಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಒಟ್ಟು 240 ಅರಣ್ಯ ರಕ್ಷಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ತುಂಬಲು ಪ್ರಕ್ರಿಯೆ ನಡೆಯುತ್ತಿದೆ.

ಈ ವಿಭಾಗಗಳು ಕ್ರಮವಾಗಿ (1) ಚಾಮರಾಜನಗರ ವೃತ್ತ, (2) ಚಿಕ್ಕಮಗಳೂರು ವೃತ್ತ, (3) ಮಂಗಳೂರು ವೃತ್ತ, (4) ಧಾರವಾಡ ವೃತ್ತ, (5) ಕೆನರಾ ವೃತ್ತ, (6) ಬೆಂಗಳೂರು ವೃತ್ತ, (7) ಶಿವಮೊಗ್ಗ ವೃತ್ತ, (8) ಮೈಸೂರು ವೃತ್ತ ಹಾಗೂ (9) ಕೊಡಗು ವೃತ್ತಗಳಿಗೆ ಸಂಬಂಧಿಸಿದ ವಿಭಾಗಗಳಾಗಿರುತ್ತದೆ.

ಆದ್ದರಿಂದ, ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವೇಳೆ ಅಭ್ಯರ್ಥಿ ತಾನು ಹೊಂದಿರುವ ಮೆರಿಟ್ ಆಧಾರದ ಮೇಲೆ ಹಾಗೂ ಮೀಸಲಾತಿಗಳನ್ವಯ ಆಯ್ಕೆ ಹೊಂದಿದಲ್ಲಿ ಯಾವ ವೃತ್ತದಲ್ಲಿ ಕಾರ್ಯ ನಿರ್ವಹಿಸಲು ಬಯಸುತ್ತೇನೆ ಎಂಬ ಬಗ್ಗೆ order of preference ನ್ನು ಅರ್ಜಿಯಲ್ಲಿ ನಮೂದಿಸತಕ್ಕದ್ದು.

ಅಭ್ಯರ್ಥಿ ಆಯ್ಕೆ ಹೊಂದಿದ ನಂತರ ಮೆರಿಟ್ ಆಧಾರದ ಮೇಲೆ ಅಭ್ಯರ್ಥಿ ಆಯ್ಕೆ ಬಯಸಿರುವ ವೃತ್ತದಲ್ಲಿ ಬರುವ ವಿಭಾಗಕ್ಕೆ ಸ್ಥಳ ಹಂಚಿಕೆ ಮಾಡಲಾಗುವುದು. ಅಭ್ಯರ್ಥಿಯು ಸ್ಥಳ ಹಂಚಿಕೆಯಾದ ವಿಭಾಗಕ್ಕೆ ಸಂಬಂಧಿಸಿದ ವೃತ್ತದಲ್ಲಿ ತನ್ನ ಸೇವಾ ಅವಧಿಯ ಮುಂದಿನ ಹಂತ ಅಂದರೆ, ರಾಜ್ಯ ವೃಂದಕ್ಕೆ ಬರುವ ವರೆಗೆ ಆ ವೃತ್ತದಲ್ಲಿಯೇ ಕಾರ್ಯ ನಿರ್ವಹಿಸಬೇಕಾಗಿರುತ್ತದೆ. ಒಂದು ವೇಳೆ ಅಭ್ಯರ್ಥಿಯು ವೈಯಕ್ತಿಕ ಕಾರಣಗಳ ಹಿನ್ನಲೆಯಲ್ಲಿ ಇನ್ನೊಂದು ವೃತ್ತಕ್ಕೆ ವರ್ಗಾವಣೆ ಹೊಂದಿದಲ್ಲಿ ಅಭ್ಯರ್ಥಿಯ ಜೇಷ್ಠತೆಯನ್ನು ನಿಯಮಾನುಸಾರ ಪರಿಗಣಿಸಲಾಗುವುದು.

10. **ವಿವಿಧ ಪ್ರವರ್ಗಗಳ ಅಡಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಲ್ಲಿಸಬೇಕಾದ ದಾಖಲೆ/ಪ್ರಮಾಣ ಪತ್ರಗಳ ವಿವರ ಕೆಳಕಂಡಂತಿದೆ:**

ವಿವಿಧ ಪ್ರವರ್ಗಗಳ ಅಡಿ ಮೀಸಲಾತಿ ಕೋರಿ ಅರ್ಜಿ ಸಲ್ಲಿಸುವವರು ಜಾತಿ ಪ್ರಮಾಣ ಪತ್ರ ಹಾಗೂ ಆದಾಯ ಪ್ರಮಾಣ ಪತ್ರ, ಇತ್ಯಾದಿ ಮೀಸಲಾತಿ ಕುರಿತು ಪ್ರಮಾಣ ಪತ್ರಗಳನ್ನು ಈ ಕೆಳಕಂಡ ನಮೂನೆಗಳಲ್ಲಿ ಹೊಂದಿರಬೇಕು. ಹಾಗೂ **ಈ ಎಲ್ಲಾ ಪ್ರಮಾಣ ಪತ್ರಗಳು (ಅಂದರೆ, ಶೈಕ್ಷಣಿಕ ಪ್ರಮಾಣ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಗ್ರಾಮೀಣ, ಕನ್ನಡ ಮಾಧ್ಯಮ, ಯೋಜನಾ ನಿರಾಶ್ರಿತ, ಮಾಜಿ ಸೈನಿಕ, ಕುಷ್ಠ ರೋಗದಿಂದ ಗುಣಮುಖ ಹೊಂದಿದ ಬಗ್ಗೆ ದೃಢೀಕರಣ ಪತ್ರ ಇತ್ಯಾದಿಗಳು) ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರುವ ಪ್ರಮಾಣ ಪತ್ರಗಳು ಆಗಿರಬೇಕು.**

10.1 ಶೈಕ್ಷಣಿಕ ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕ ಪಟ್ಟಿ

10.2 ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರವನ್ನು "ನಮೂನೆ-ಡಿ" ರಲ್ಲಿ ಪಡೆದಿರಬೇಕು.

10.3 ಪ್ರವರ್ಗ-I ಕ್ಕೆ ಸೇರಿದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರವನ್ನು "ನಮೂನೆ-ಇ" ರಲ್ಲಿ ಪಡೆದಿರಬೇಕು.

10.4 ಪ್ರವರ್ಗ-IIಎ, IIಬಿ, IIIಎ ಮತ್ತು IIIಬಿ. ಗೆ ಸೇರಿದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ನೀಡಲಾದ ಆದಾಯ ಮತ್ತು ಜಾತಿ ಪ್ರಮಾಣ ಪತ್ರವನ್ನು "ನಮೂನೆ-ಎಫ್" ರಲ್ಲಿ ಪಡೆದಿರಬೇಕು.

<u>ವಿಶೇಷ ಸೂಚನೆ:</u> "ನಮೂನೆ-ಎಫ್" ಪ್ರಮಾಣ ಪತ್ರವು ಅಧಿಸೂಚನೆಯ ದಿನಾಂಕಕ್ಕೆ ಐದು (5) ವರ್ಷಗಳಿಗಿಂತ ಹೆಚ್ಚು ಹಳೆಯ ಸಮಯದ್ದಾಗಿರಬಾರದು. ಅವಧಿ ಮೀರಿದ ಪ್ರಮಾಣ ಪತ್ರವನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ.

10.5 ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಯು ಸಂಬಂಧಪಟ್ಟ ತಹಶೀಲ್ದಾರ್‌ರಿಂದ "ನಮೂನೆ-3" ರಲ್ಲಿ ನೀಡಿರುವ ಪ್ರಮಾಣ ಪತ್ರವನ್ನು ಪಡೆದಿರಬೇಕು.

10.6 ಮಾಜಿ ಸೈನಿಕ ಅಭ್ಯರ್ಥಿಗಳು ಸಂಬಂಧಪಟ್ಟ ಘಟಕದಿಂದ ಡಿಸ್‌ಚಾರ್ಜ್ ಹೊಂದಿದ ಬಗ್ಗೆ ಮೂಲ ಪ್ರಮಾಣ ಪತ್ರ ಮತ್ತು ಪೆನ್‌ಷನ್ ಪಡೆಯುತ್ತಿರುವ ಬಗ್ಗೆ ದಾಖಲೆ ಪತ್ರ ಪಡೆದಿರಬೇಕು ಹಾಗೂ ಮಾಜಿ ಸೈನಿಕ ಮೀಸಲಾತಿಗೆ ನಿಯಮಾನುಸಾರ ಅರ್ಹರೇ ಎಂಬ ಬಗ್ಗೆ ಪ್ರಮಾಣ ಪತ್ರವನ್ನು ಹತ್ತಿರದ ಸೈನಿಕ ಕಲ್ಯಾಣ ಹಾಗೂ ಪುನರ್ವಸತಿ ಇಲಾಖೆಯಿಂದ ಪಡೆದಿರಬೇಕು.

10.7 (ಅ) ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ-I, IIಎ, IIಬಿ, IIIಎ ಮತ್ತು IIIಬಿ, ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರಿಗೆ (ಎಲ್ಲಾ ವರ್ಷಗಳು) ಗ್ರಾಮೀಣ ಪ್ರದೇಶದ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡಿದ ಬಗ್ಗೆ ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರಿಂದ ನೀಡಲಾದ "ನಮೂನೆ-2"ನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೇಲುರುಜು ಮಾಡಿದ ಪ್ರಮಾಣ ಪತ್ರವನ್ನು ಪಡೆದಿರಬೇಕು.

(ಆ) ಗ್ರಾಮೀಣ ಮೀಸಲಾತಿ ಕೋರಿರುವ ಸಾಮಾನ್ಯ ಅರ್ಹತೆಯ (General Merit) ಅಭ್ಯರ್ಥಿಗಳು ಮೇಲೆ 10.7(ಅ) ರಲ್ಲಿ ತಿಳಿಸಿರುವ "ನಮೂನೆ-2" ರ ಜೊತೆಗೆ ನಿಗದಿತ "ನಮೂನೆ-1" ರಲ್ಲಿ ಸಂಬಂಧಪಟ್ಟ ತಹಶೀಲ್ದಾರರಿಂದ ಅವರು ಮೇಲುಸ್ಥರ (Creamy Layer) ಪರಿಮಿತಿಯಲ್ಲಿ ಬರುವುದಿಲ್ಲವೆಂದು ದೃಢೀಕರಿಸಿರುವ ಪ್ರಮಾಣ ಪತ್ರ ಪಡೆದಿರಬೇಕು.

<u>**ವಿಶೇಷ ಸೂಚನೆ:**</u> ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ-I, IIಎ, IIಬಿ, IIIಎ ಮತ್ತು IIIಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಆದಾಯ ಮತ್ತು ಜಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

10.8 ಕನ್ನಡ ಮಾಧ್ಯಮ ವರ್ಗೀಕರಣದಲ್ಲಿ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಒಂದನೇ ತರಗತಿಯಿಂದ ಹತ್ತನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಬಗ್ಗೆ ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಮಾಡಿಸಿ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಿದ ಪ್ರಮಾಣ ಪತ್ರ ಪಡೆದಿರಬೇಕು.

10.9 ಅರಣ್ಯ ಪ್ರೇರಕರಾಗಿ ಅಧಿಸೂಚನೆ ದಿನಾಂಕಕ್ಕೆ ಐದು (5) ವರ್ಷಗಳ ಸೇವೆಯನ್ನು ಸಲ್ಲಿಸಿದ್ದು, ಪ್ರಸ್ತುತ ಅರಣ್ಯ ಪ್ರೇರಕರಾಗಿ ಮುಂದುವರೆಯುತ್ತಿರುವ ಅರಣ್ಯ ಪ್ರೇರಕರ ಬಗ್ಗೆ ಸಂಬಂಧಿಸಿದ ಸಾಮಾಜಿಕ ಅರಣ್ಯ ವಿಭಾಗಗಳ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

10.10 ದಿನಗೂಲಿ ನೌಕರರು ದಿನಾಂಕ 01-07-1984 ರಿಂದ 29-01-1990ರ ಒಳಗೆ ದಿನಗೂಲಿ ನೌಕರರಾಗಿ ಅರಣ್ಯ ಇಲಾಖೆಯಲ್ಲಿ ಸೇವೆಗೆ ಸೇರಿದ್ದು, ಮಸ್ಟರ್ ರೋಲ್ ಅಡಿಯಲ್ಲಿ ದಿನಗೂಲಿ ನೌಕರರಾಗಿ ಈಗಲೂ ಸೇವೆಯಲ್ಲಿ

ಮುಂದುವರೆಯುತ್ತಿರುವ ಕುರಿತು ಸಂಬಂಧಿಸಿದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

10.11 ಕುಷ್ಠರೋಗದಿಂದ ಗುಣಮುಖ ಹೊಂದಿರುವ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಮೀಸಲಾತಿ ಕೋರುವ ಅಭ್ಯರ್ಥಿಗಳು **ಕುಷ್ಠರೋಗದಿಂದ ಗುಣಮುಖರಾಗಿರುವ ಬಗ್ಗೆ** ವೈದ್ಯಕೀಯ ಪ್ರಮಾಣ ಪತ್ರವನ್ನು ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೇನೆನಿ 2005 ದಿನಾಂಕ 19-11-2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಕುಷ್ಠರೋಗದಿಂದ ಗುಣಮುಖರಾಗಿರುವ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಕುಷ್ಠರೋಗದಿಂದ ಗುಣಮುಖ ಹೊಂದಿರುವ ಅಭ್ಯರ್ಥಿಗಳಿಗೆ ಯಾವುದೇ ವಿಧವಾದ ಅಂಗವಿಕಲತೆಯನ್ನು ಹೊಂದಿರಬಾರದು.

11. **ಗಮನಿಸಬೇಕಾದ ಮುಖ್ಯ ಅಂಶಗಳು:**

11.1 ಅರಣ್ಯ ರಕ್ಷಕ ಹುದ್ದೆಗೆ ನೇಮಕಗೊಂಡ ನಂತರ ಸದರಿ ಅಭ್ಯರ್ಥಿಯು ತರಬೇತಿಗೆ ಹಾಜರಾಗುವ ಮೊದಲು ನೇಮಕಾತಿ ಪ್ರಾಧಿಕಾರದ ಸಮಕ್ಷಮ ರೂಪಾಯಿ 1,00,000.00 ಸಾಲ್ವೆಂಟ್ ಶೂರಿಟಿ ಹೊಂದಿರುವ ಇಬ್ಬರು ಅಥವಾ ರೂ. 12,500/- ಗಿಂತ ಹೆಚ್ಚು ಮಾಸಿಕ ವೇತನ ಪಡೆಯುತ್ತಿರುವ ಮತ್ತು ತರಬೇತಿ ಮುಗಿಯುವ ದಿನಾಂಕದಿಂದ ಕನಿಷ್ಠ 6 ವರ್ಷ ಸೇವಾವಧಿ ಉಳಿದಿರುವ ಇಬ್ಬರು ಸರ್ಕಾರಿ ನೌಕರರ ಜಾಮೀನು ಕೊಡಬೇಕು. ಇದು ಸಾಧ್ಯವಾಗದಿದ್ದ ಪಕ್ಷದಲ್ಲಿ ಅಭ್ಯರ್ಥಿಯು ರೂ. 1,00,000.00 ಮೊತ್ತದ ರಾಷ್ಟ್ರೀಯ ಉಳಿತಾಯ ಸರ್ಟಿಫಿಕೇಟನ್ನು ಸಂಬಂಧಿಸಿದ ಉಪ ಅರಣ್ಯ ಸಂರಕ್ಷಣಾಧಿಕಾರಿ ಇವರ ಹೆಸರಿಗೆ ಅಡವು ಇರಿಸಬಹುದು. ಅಭ್ಯರ್ಥಿಯು ಇಲಾಖೆಯಲ್ಲಿ ನೇಮಕಾತಿಯಾದ ದಿನಾಂಕದಿಂದ ಕನಿಷ್ಠ 5 ವರ್ಷ ಸೇವೆ ಸಲ್ಲಿಸುವುದಾಗಿ, ತಪ್ಪಿದಲ್ಲಿ ಸರ್ಕಾರವು ತರಬೇತಿಯ ಬಗ್ಗೆ ಭರಿಸಿದ ಸಂಪೂರ್ಣ ವೆಚ್ಚವನ್ನು ಮತ್ತು ತರಬೇತಿ ಅವಧಿಯಲ್ಲಿ ಪಡೆದ ವೇತನವನ್ನು ಶೇ.8 ರ ದಂಡನೆ ಬಡ್ಡಿಯೊಂದಿಗೆ ಸರ್ಕಾರಕ್ಕೆ ಪಾವತಿ ಮಾಡಲು ಮತ್ತು ಆಯ್ಕೆ ಪ್ರಾಧಿಕಾರ ನಿಗದಿಪಡಿಸುವ ಇತರೆ ಷರತ್ತುಗಳನ್ನು ಪೂರೈಸಲು ಸಿದ್ಧವಿರುವುದಾಗಿ ಛಾಪಾ ಕಾಗದದಲ್ಲಿ ನಿಗದಿತ ನಮೂನೆಯಲ್ಲಿ ಅಭ್ಯರ್ಥಿಯು ಕರಾರು ಪತ್ರವನ್ನು ಬರೆದು ಕೊಡತಕ್ಕದ್ದು.

11.2. ಒಂದು ವೇಳೆ ಅಭ್ಯರ್ಥಿಯು ಸೂಕ್ತ ಕಾರಣಗಳನ್ನು ಹೊರತುಪಡಿಸಿ (ಕಾರಣದ ಸೂಕ್ತತೆ ಬಗ್ಗೆ ಇಲಾಖೆಯ ನಿರ್ಣಯವೇ ಅಂತಿಮವಾಗುತ್ತದೆ) ಷರತ್ತುಗಳನ್ನು ಪೂರೈಸಲು ವಿಫಲವಾದಲ್ಲಿ ಅಥವಾ ತರಬೇತಿಯನ್ನು ಪೂರೈಸಿ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಲು ವಿಫಲರಾದಲ್ಲಿ ಅಥವಾ ಯಾವುದೇ ಕಾರಣಕ್ಕಾಗಿ ತರಬೇತಿಯಿಂದ ತೆಗೆದು ಹಾಕಲ್ಪಟ್ಟರೆ ಅಥವಾ ಸ್ವಇಚ್ಛೆಯಿಂದ ತರಬೇತಿ ಮಧ್ಯದಲ್ಲಿ ಬಿಟ್ಟುಬಿಟ್ಟರೆ ಅಥವಾ ಪರೀಕ್ಷಾರ್ಥ ಅವಧಿಯನ್ನು ಯಶಸ್ವಿಯಾಗಿ ಪೂರೈಸದಿದ್ದರೆ ಸರ್ಕಾರವು ಅಭ್ಯರ್ಥಿಯ ತರಬೇತಿಗಾಗಿ ಭರಿಸಿದ ವೆಚ್ಚವನ್ನು ಮತ್ತು ತರಬೇತಿ ಅವಧಿಯಲ್ಲಿ ಪಡೆದ ವೇತನವನ್ನು ಮೇಲೆ ನಿಗದಿಪಡಿಸಿದ ದರದಲ್ಲಿ ಬಡ್ಡಿಯೊಂದಿಗೆ ಮರು ಪಾವತಿಸಲು ಅಭ್ಯರ್ಥಿ ಮತ್ತು ಜಾಮೀನುದಾರರು ಒಟ್ಟಾಗಿಯೂ ಮತ್ತು ಪ್ರತ್ಯೇಕವಾಗಿಯೂ ಭರಿಸಲು ಬದ್ಧರಾಗಿರತಕ್ಕದ್ದು. ಅಂತಹ ಹಣವನ್ನು ಕಂದಾಯ ಬಾಕಿಯಾಗಿ ಇವರೆಲ್ಲರಿಂದ ಒಟ್ಟಾರೆಯಾಗಿ ಅಥವಾ ಪ್ರತಿಯೊಬ್ಬರಿಂದ ಪ್ರತ್ಯೇಕವಾಗಿ ವಸೂಲು ಮಾಡುವ ಹಕ್ಕನ್ನು ಇಲಾಖೆಯು ಹೊಂದಿರುತ್ತದೆ.

11.3 ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಯು ಆಯ್ಕೆಗೆ ಅರ್ಹತೆ ಪಡೆಯುವುದಿಲ್ಲ.

11.4 ಅಭ್ಯರ್ಥಿಗಳು ಅರ್ಜಿ ಹಾಕುವ ಮೊದಲು ದೇಹದಾರ್ಢ್ಯತೆಯ ಕುರಿತು ಸದರಿ ಹುದ್ದೆಗೆ ನಿಗದಿಪಡಿಸಿರುವ ಮಾನದಂಡವು ತಮಗೆ ಇರುವ ಕುರಿತು ಖಚಿತಪಡಿಸಿಕೊಂಡು ಅರ್ಜಿಯನ್ನು ಸಲ್ಲಿಸಲು ತಿಳಿಸಿದೆ.

11.5 ಯಾವುದೇ ವಿಧದ ಅಂಗವಿಕಲತೆಯನ್ನು ಹೊಂದಿರುವ ಅಭ್ಯರ್ಥಿಗಳು ಅರಣ್ಯ ರಕ್ಷಕ ಹುದ್ದೆಗೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಕುಷ್ಠರೋಗದಿಂದ ಗುಣಮುಖ ಹೊಂದಿದ ಅಭ್ಯರ್ಥಿಗಳು ಯಾವುದೇ ವಿಧದ ಅಂಗವಿಕಲತೆಯನ್ನು ಹೊಂದಿರಬಾರದು.

11.6 ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ On-line ಅರ್ಜಿಯ ಒಂದು ಜೆರಾಕ್ಸ್ ಪ್ರತಿಯನ್ನು ಮತ್ತು ಶುಲ್ಕ ಪಾವತಿಸಿದ ರಶೀದಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.

11.7 ಅಭ್ಯರ್ಥಿಗಳು On-line ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ/ವಿವರಗಳ ಆಧಾರದ ಮೇಲೆ ಅವರ ಅರ್ಹತೆಯನ್ನು ಪರಿಗಣಿಸಿ 1:20 (ಖಾಲಿ ಹುದ್ದೆ/ಅಭ್ಯರ್ಥಿ) ಅನುಪಾತದ ಪಟ್ಟಿಯನ್ನು ಸಿದ್ಧಪಡಿಸುವುದರಿಂದ ಅಭ್ಯರ್ಥಿಯು ಅರ್ಜಿಯನ್ನು ಭರ್ತಿ ಮಾಡುವಾಗ ಅಸ್ಪಷ್ಟ / ಅಪೂರ್ಣ / ತಪ್ಪು ಅಥವಾ ಸುಳ್ಳು ಮಾಹಿತಿ ನೀಡಬಾರದು. ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅಭ್ಯರ್ಥಿಗಳೇ ಅದಕ್ಕೆ ನೇರ ಮತ್ತು ಸಂಪೂರ್ಣ ಜವಾಬ್ದಾರರಾಗುತ್ತಾರೆ. ಅಭ್ಯರ್ಥಿಗಳು On-line ಅರ್ಜಿಯಲ್ಲಿ ನೀಡಿರುವ ಮಾಹಿತಿ / ವಿವರಗಳನ್ನು ಯಾವುದೇ ಹಂತದಲ್ಲಿಯೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ. ಆದ ಪ್ರಯುಕ್ತ ಅಭ್ಯರ್ಥಿಗಳು On-line ಅರ್ಜಿಯನ್ನು ಭರ್ತಿ ಮಾಡುವಾಗ ಈ ಕಚೇರಿಯ ಅಧಿಸೂಚನೆಯಲ್ಲಿ ತಿಳಿಸಿರುವ ಎಲ್ಲಾ

ಅಂಶಗಳನ್ನು ಸರಿಯಾಗಿ ಅರ್ಥೈಸಿಕೊಂಡು, ಅರ್ಜಿಯನ್ನು ಸರಿಯಾಗಿ ಮತ್ತು ಸಮರ್ಪಕವಾಗಿ ಭರ್ತಿ ಮಾಡತಕ್ಕದ್ದು.

11.8 ಪ್ರವರ್ಗದ ಮೀಸಲಾತಿಯಲ್ಲಿ ಆಯ್ಕೆ ಬಯಸುವ ಅಭ್ಯರ್ಥಿಗಳು ಅರ್ಜಿಯಲ್ಲಿ ಪ್ರವರ್ಗದ ಕಾಲಂ ಅನ್ನು ಕಡ್ಡಾಯವಾಗಿ ನಮೂದಿಸಬೇಕು. ಈ ಕಾಲಂ ಅನ್ನು ಭರ್ತಿ ಮಾಡದೆ ಖಾಲಿ ಬಿಟ್ಟಲ್ಲಿ "ಸಾಮಾನ್ಯ ಅರ್ಹತೆ" ಎಂದು ಪರಿಗಣಿಸಲಾಗುವುದು. ಯಾವುದೇ ಹಂತದಲ್ಲಿ ಅಭ್ಯರ್ಥಿಯು ತಾನು ಹೊಂದಿರುವ ಪ್ರವರ್ಗದ ಕುರಿತು ಮಾಹಿತಿಯನ್ನು ಹೊಸದಾಗಿ ಸೇರ್ಪಡೆ ಮಾಡಲು ಅಥವಾ ಬದಲಾವಣೆ ಮಾಡಲು ಅವಕಾಶವಿಲ್ಲ.

11.9 ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡಿರುವ ಮಾಹಿತಿಗಳು ಸರಿ ಇದೆ ಎಂದು ಭಾವಿಸಿ ಅವರುಗಳು ಮೂಲ ದಾಖಲೆಗಳ ಪರಿಶೀಲನೆ ಮತ್ತು ದೇಹದಾರ್ಢ್ಯತೆ, ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ ಮತ್ತು ಲಿಖಿತ Aptitude ಪರೀಕ್ಷೆಯನ್ನು ಬರೆಯಲು ಅರ್ಹರೇ ಎಂಬುದನ್ನು ಪರಿಗಣಿಸಿ ಅರ್ಹರೆಂದು ಕಂಡು ಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರಗಳನ್ನು ಜಾರಿ ಮಾಡಲಾಗುತ್ತದೆ. ಆದ್ದರಿಂದ ನಿಗದಿಪಡಿಸಿದ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ, ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.

11.10 ಅರ್ಜಿ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರುಪಾವತಿ ಮಾಡಲಾಗುವುದಿಲ್ಲ.

11.11 ಒಬ್ಬನೇ ಅಭ್ಯರ್ಥಿಯು ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ತಾನು ಸಲ್ಲಿಸಿರುವ ಎಲ್ಲಾ ಅರ್ಜಿಗಳಲ್ಲಿಯೂ ಒಂದೇ ರೀತಿ ಮಾಹಿತಿಯನ್ನು ನೀಡಿದಲ್ಲಿ ಅಭ್ಯರ್ಥಿ ಸಲ್ಲಿಸಿರುವ ಕೊನೆಯ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಈ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ತೀರ್ಮಾನವೇ ಅಂತಿಮವಾಗಿರುತ್ತದೆ.

11.12 ಪ್ರಸ್ತುತ ಸರ್ಕಾರಿ (ಕೇಂದ್ರ ಸರ್ಕಾರ / ಕರ್ನಾಟಕ ರಾಜ್ಯ ಸರ್ಕಾರ / ಇತರೆ ರಾಜ್ಯಗಳು) ಹಾಗೂ ಸಂಸ್ಥೆಗಳಲ್ಲಿ ಅಥವಾ ಪ್ರಾಧಿಕಾರದಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಕಡ್ಡಾಯವಾಗಿ ಅನುಮತಿ ಪತ್ರವನ್ನು ಪಡೆದಿಟ್ಟುಕೊಂಡು ಅರಣ್ಯ ಇಲಾಖೆಯು ಆಪೇಕ್ಷಿಸಿದಾಗ ನೀಡತಕ್ಕದ್ದು.

11.13 ಯಾವುದೇ ಅಭ್ಯರ್ಥಿಯು ತನ್ನ ಆಯ್ಕೆಗೆ ಸಂಬಂಧಿಸಿದಂತೆ ಬಾಹ್ಯ ಒತ್ತಡ ತರಲು ಪ್ರಯತ್ನಿಸಿದಲ್ಲಿ ಅಂತಹ ಅಭ್ಯರ್ಥಿಯನ್ನು ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗುವುದು.

11.14 ಕರ್ನಾಟಕ ರಾಜ್ಯದ ಯಾವುದೇ ಸರ್ಕಾರಿ ಇಲಾಖೆ, ಕೇಂದ್ರ ಸರ್ಕಾರಿ ಇಲಾಖೆ ಅಥವಾ ಅರೆ ಸರ್ಕಾರಿ ಸ್ವಾಮ್ಯದ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

11.15 ಕಾನೂನು ಬಾಹಿರವೆಂದು ಘೋಷಿಸಲಾದ ಸಂಸ್ಥೆ / ಸಂಸ್ಥೆಗಳು ಅಥವಾ ಸಂಘದ / ಸಂಘಗಳ ಸದಸ್ಯರಾಗಿದ್ದರೆ ಅಥವಾ ಇನ್ನಾವುದೇ ರೀತಿಯಲ್ಲಿ ಅಂತಹ ಸಂಸ್ಥೆ / ಸಂಸ್ಥೆಗಳು ಅಥವಾ ಸಂಘದ/ಸಂಘಗಳೊಂದಿಗೆ ನಿಕಟ ಸಂಪರ್ಕ ಹೊಂದಿದ್ದರೆ ಅಂತಹ ವ್ಯಕ್ತಿ ನೇಮಕಾತಿಗೆ ಅರ್ಹರಾಗುವುದಿಲ್ಲ.

11.16 ಅಭ್ಯರ್ಥಿಯು ಸಮಾಜಘಾತುಕ ಕೃತ್ಯಗಳಲ್ಲಿ ತೊಡಗಿ ಅಪರಾಧಿಯಾಗಿದ್ದರೆ ಅಂತಹ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

11.17 ಒಬ್ಬರಿಗಿಂತ ಹೆಚ್ಚು ಜೀವಂತ ಪತ್ನಿಯರನ್ನು / ಪತಿಯರನ್ನು ಹೊಂದಿದ ಪುರುಷ / ಮಹಿಳೆ ಅಭ್ಯರ್ಥಿಗಳು ಸರ್ಕಾರದ ಪೂರ್ವಾನುಮತಿ ಇಲ್ಲದೇ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

11.18 ಯಾವುದೇ ಅಭ್ಯರ್ಥಿಯು ಕೇಂದ್ರ ಅಥವಾ ಯಾವುದೇ ರಾಜ್ಯ ಸರ್ಕಾರ / ಸರ್ಕಾರಿ ಸಂಸ್ಥೆಗಳಿಗೆ ನಡೆಸುವ ಯಾವುದೇ ಪರೀಕ್ಷೆಗಳಿಗೆ ಅಥವಾ ಆಯ್ಕೆಗಳಿಗೆ ಹಾಜರಾಗಲು ತಾತ್ಕಾಲಿಕವಾಗಿ ಬಹಿಷ್ಕರಿಸಲ್ಪಟ್ಟಿದ್ದರೆ ಅಥವಾ ಖಾಯಂ ಆಗಿ ಅನರ್ಹಗೊಂಡಿದ್ದರೆ ಅಥವಾ ಬಹಿಷ್ಕರಿಸಲ್ಪಟ್ಟಿದ್ದರೆ, ಅಂತಹ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

11.19 ಅಭ್ಯರ್ಥಿಯು ನೇಮಕಾತಿ ಪರೀಕ್ಷೆಗೆ ಬೇರೊಬ್ಬ ವ್ಯಕ್ತಿಯನ್ನು ತನ್ನ ಪರವಾಗಿ ಕಳುಹಿಸಿದಲ್ಲಿ ಅಥವಾ ತಪ್ಪು ಮಾಹಿತಿಗಳನ್ನು ನಮೂದಿಸಿದಲ್ಲಿ ಅಥವಾ ಕೃತ್ರಿಮ ಅಥವಾ ತಿದ್ದಿದ ದಾಖಲಾತಿಗಳನ್ನು ಅಥವಾ ಅಸತ್ಯ ವಿವರಗಳನ್ನು ನೀಡಿದಲ್ಲಿ ಅಥವಾ ಸತ್ಯ ವಿಷಯಗಳನ್ನು ಮರೆಮಾಚಿದ ಅಥವಾ ಅನುಚಿತ ಮಾರ್ಗಗಳನ್ನು ಉಪಯೋಗಿಸಿದಲ್ಲಿ ಅಥವಾ ಪ್ರಯತ್ನಿಸಿದಲ್ಲಿ ಈ ನೇಮಕಾತಿಗೆ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು ಮತ್ತು ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ಉಪ ನಿಯಮ 20 ರಂತೆ ಅಪರಾಧಿ ವ್ಯವಹರಣೆಗೆ ಒಳಪಡುವರು.

11.20 ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ–ಎಸ್‌ಪಿಎಲ್–04–ಪಿಇಟಿ–2005 ದಿನಾಂಕ 31-3-2006 ರಂತೆ ಅಂಶದಾಯಿ ನಿವೃತ್ತಿ ಯೋಜನೆ (Contributory Pension Scheme) ಗೆ ಈ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಬದ್ಧರಾಗಿರುತ್ತಾರೆ.

11.21 ಆಯ್ಕೆ ಮತ್ತು ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಆಯ್ಕೆಗೆ ಪರಿಗಣಿಸಿರುವ ಅಂಶಗಳ ಬಗ್ಗೆ ವ್ಯತ್ಯಾಸ ಕಂಡು ಬಂದಲ್ಲಿ ಅಥವಾ ಆಕ್ಷೇಪಣೆ ಸಲ್ಲಿಕೆಯಾದಲ್ಲಿ, ಕೋರ್ಟು ತೀರ್ಪುಗಳು, ಸರಕಾರದ ನಿರ್ದೇಶನಗಳು,

ಇಲಾಖೆ ಸುತ್ತೋಲೆಗಳು ಬಂದಲ್ಲಿ, ಪ್ರಕಟಿಸಿರುವ ಆಯ್ಕೆ ಪಟ್ಟಿಯಲ್ಲಿ ಸೂಕ್ತ ಬದಲಾವಣೆ ಮಾಡಿ ಆಯ್ಕೆ ಪಟ್ಟಿ ಪರಿಷ್ಕರಿಸುವ ಅಧಿಕಾರವನ್ನು ಆಯ್ಕೆ ಪ್ರಾಧಿಕಾರವು ಹೊಂದಿರುತ್ತದೆ.

11.22 ಒಂದು ವೇಳೆ ಅಧಿಸೂಚನೆಯಲ್ಲಿ ನಮೂದಿಸಿರುವ ಹುದ್ದೆಗಳ ಸಂಖ್ಯೆಯಲ್ಲಿ ಕಡಿತ ಅಥವಾ ಹೆಚ್ಚುವರಿ ಆದಲ್ಲಿ ಮತ್ತು ಮೀಸಲಾತಿ ವರ್ಗೀಕರಣದಲ್ಲಿ ಏನಾದರೂ ಬದಲಾವಣೆ ಮಾಡಬೇಕಾದ ಅವಶ್ಯಕತೆ ಕಂಡು ಬಂದಲ್ಲಿ ಬದಲಾವಣೆ ಮಾಡಲಾಗುವುದು ಮತ್ತು ಬದಲಾದ ವಿವರಗಳನ್ನು ಇಲಾಖಾ ವೆಬ್‌ಸೈಟ್: www.aranya.gov.in ನಲ್ಲಿ ಪ್ರಕಟಿಸಲಾಗುವುದು.

11.23 ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ಅಧಿನಿಯಮಗಳಿಗೆ (Rules & Regulations) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

11.24 ಉತ್ತರ ಪತ್ರಿಕೆಯನ್ನು ಸ್ಕ್ಯಾನಿಂಗ್ ಮಾಡಿಸಿ ಗಣಕ ಯಂತ್ರದ ಮುಖೇನ ಅರ್ಹತಾ ಪಟ್ಟಿಯನ್ನು ಸಿದ್ಧಪಡಿಸುವುದರಿಂದ ಲಿಖಿತ (Aptitude) ಪರೀಕ್ಷೆಗೆ ಅರ್ಹತೆ ಪಡೆದಿರುವ ಅಭ್ಯರ್ಥಿಗಳು ಉತ್ತರ ಪತ್ರಿಕೆಯ ಮಾಹಿತಿಯನ್ನು ಭರ್ತಿ ಮಾಡುವ ಸಲುವಾಗಿ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಗೆ ತಪ್ಪದೇ ಹಾಜರಾಗತಕ್ಕದ್ದು. ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಕೆಲವು ಮಾರ್ಗಸೂಚನೆಗಳನ್ನು ನೀಡುತ್ತಾರೆ.

11.25 ನೇರ ನೇಮಕಾತಿ ಪ್ರಕ್ರಿಯೆಯ ಯಾವುದೇ ವಿಷಯದಲ್ಲಿ ಯಾವುದೇ ಪತ್ರ ವ್ಯವಹಾರಕ್ಕೆ ಆಸ್ಪದವಿರುವುದಿಲ್ಲ.

11.26 ಅಭ್ಯರ್ಥಿಯ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಯಾವುದೇ ಸ್ಪಷ್ಟೀಕರಣಕ್ಕೆ ಆಯ್ಕೆ ಪ್ರಾಧಿಕಾರದ ತೀರ್ಮಾನವೇ ಅಂತಿಮವಾಗಿರುತ್ತದೆ. ಎಲ್ಲಾ ಕಾನೂನು ವಿವಾದಗಳು ಕರ್ನಾಟಕ ಆಡಳಿತ ನ್ಯಾಯಮಂಡಳಿಯ ವ್ಯಾಪ್ತಿಗೆ ಒಳಪಟ್ಟಿರುತ್ತದೆ.

ದಿನಾಂಕ: 10-04-2017
ಬೆಂಗಳೂರು

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮುಖ್ಯಸ್ಥರು, ಅರಣ್ಯ ಪಡೆ) ಹಾಗೂ
ಆಯ್ಕೆ ಪ್ರಾಧಿಕಾರ